ಸಂಪುಟ: 06 ಸಂಚಿಕೆ: 157 ಪುಟಗಳು: 08 ಬುಧವಾರ 19 ಆಗಸ್ಟ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಕಾರಣವೇನಾದರೂ ಇರಲಿ, ಇವತ್ತಿನ ದಿನವನ್ನು ಪ್ರೀತಿಸಿ. ಇಡೀ ದಿನದ ಕೆಲಸಗಳು ಸಲೀಸಾಗಲಿವೆ.

## ರಾಜೀನಾಮೆಗೆ ಪಟ್ಟು ಸರ್ಕಾರಕ್ಕೆ ಇಕ್ಕಟ್ಟು





ರಾಜ್ಯದ ಜನರು, ರೈತರು ಬರದಿಂದ ತತ್ತರಿಸಿದ್ದಾರೆ. ಈ ಕುರಿತು ಗಂಭೀರ ಚರ್ಚೆ ನಡೆಸಬೇಕಿರುವ ವಿರೋಧ ಪಕ್ಷದ ಸದಸ್ಯರು ಒಬ್ಬ ಸಚಿವರ ಮೇಲೆ ಸೇಡು ತೀರಿಸಿಕೊಳ್ಳಲು ಕಾಲಹರಣ ಮಾಡುತ್ತಿದ್ದಾರೆ
. ಜಿ. ಪರಮೇಶ್ವರ, ಉಪಮುಖ್ಯಮಂತ್ರಿ

ಆರೋಪಗಳ ಕುರಿತು ನಿರ್ಣಯ ಮಂಡಿಸಿ, ನಂತರ ಈ ಕುರಿತು ಚರ್ಚೆ ನಡೆಸೋಣ. ಸುಮ್ಮನೆ ಕಲಾಪದ ಸಮಯ ವ್ಯರ್ಥ ಮಾಡಬೇಡಿ' ಎಂದು ಉಪಮುಖ್ಯಮಂತ್ರಿ ಜಿ. ಪರಮೇಶ್ವರ ವಿರೋಧ ಪಕ್ಷಗಳ ಸದಸ್ಯರನ್ನು ವಿನಂತಿಸಿದರು. ಅವರ ಮಾತಿಗೆ ಪ್ರತಿಕ್ರಿಯಿಸಿದ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ, 'ಕಳಂಕಿತರನ್ನು ಸದನದಲ್ಲಿ ಕೂರಿಸಿಕೊಂಡು ಅವರ ಬಗ್ಗೆಯೇ ಚರ್ಚೆ ಮಾಡುವುದು ಸಾಧ್ಯವಿಲ್ಲ. ಈಗಾಗಲೇ ತನಿಖಾ ಸಂಸ್ಥೆಗಳು ಅವರ ವಿರುದ್ಧ ನಾಲ್ಕು ದೋಷಾರೋಪ ಪಟ್ಟಿ ಸಲ್ಲಿಸಿವೆ. ಅವರ ರಾಜೀನಾಮೆ ಪಡೆದರಷ್ಟೇ ಮುಂದಿನ ನಡೆ ನಿರ್ಧರಿಸುತ್ತೇವೆ' ಎಂದರು. ರಾಜ್ಯಪಾಲರೇ ಅವರಿಗೆ ಪ್ರತಿಜ್ಞಾ ವಿಧಿ ಬೋಧಿಸಿದ್ದಾರೆ. ಅವರು ಸಂವಿಧಾನಬದ್ಧವಾಗಿ ಸಚಿವ ಸ್ಥಾನ ಅಲಂಕರಿ ಸಿದ್ದಾರೆ. ಅವರನ್ನು ಕೈಬಿಡಲು ಆಗದು' ಎಂದು ಪರಮೇಶ್ವರ, ಬೆಂಗಳೂರು ನಗಾರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಹೇಳಿದರು. ಯಾರ ಮಾತಿಗೂ ಕಿವಿಗೊಡದ ವಿರೋಧ ಪಕ್ಷಗಳ ಸದಸ್ಯರು ರಾಜೀನಾಮೆಗೆ ಪಟ್ಟು ಹಿಡಿದರು.

ಕಳಂಕ ಹೊತ್ತಿರುವ ನಾಗೇಂದ್ರ ಅವರು ಮೊದಲು ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಸದನದ ಒಳಗೆ, ಹೊರಗೆ ನಿರಂತರ ಹೋರಾಟ ನಡೆಸುತ್ತೇವೆ. ಹಿಂದಕ್ಕೆ ಸರಿಯುವ ಪ್ರಶ್ನೆಯೇ ಇಲ್ಲ.
ಆರ್. ಅಶೋಕ, ವಿರೋಧ ಪಕ್ಷದ ನಾಯಕ



### ಗದ್ದಲ ಗೊಂದಲ

• ಉದಯವಾಹಿನಿ, ಬೆಂಗಳೂರು

ಸಚಿವ ಸ್ಥಾನಕ್ಕೆ ಬಿ.ನಾಗೇಂದ್ರ, ರಾಜೀನಾಮೆ ನೀಡಬೇಕೆಂದು ವಿಧಾನಪರಿಷತ್‌ನಲ್ಲಿ ವಿರೋಧ ಪಕ್ಷಗಳು ಆಗ್ರಹಿಸಿದವು. ಭೋಜನ ವಿರಾಮದ ಬಳಿಕ ಕಲಾಪ ಆರಂಭವಾಗುತ್ತಿದ್ದಂತೆ ಕಳಂಕಿತ ಸಚಿವ ನಾಗೇಂದ್ರ, ಅವರನ್ನ ರಾಜೀನಾಮೆ ಕೊಡಿಸುವಂತೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರಸ್ತಾಪಿಸಿದರು.

ಪ್ರಶ್ನೋತ್ತರ ಕಲಾಪವಿದ್ದು ಚರ್ಚೆಗೆ ಅವಕಾಶವಿಲ್ಲ ಎಂದು ವಿರೋಧ ಪಕ್ಷಗಳ ಮನವಿಯನ್ನ ಸಭಾಪತಿ ಸಲೀಂ ಅಹಮದ್ ತಳ್ಳಿ ಹಾಕಿದರು. ಇದಕ್ಕೆ ಅಕ್ರೋಶ ವ್ಯಕ್ತಪಡಿಸಿದ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಾಲ್ಮೀಕಿ ಅಭಿವೃದ್ದಿ ನಿಗಮದಲ್ಲಿ ನಡೆದ ಹಗರಣ ಆರೋಪಿಯಾಗಿರುವ ಕಳಂಕಿತ ಸಚಿವ ನಾಗೇಂದ್ರ, ಅವರಿಂದ ರಾಜೀನಾಮೆ ಕೊಡಿಸಬೇಕು ಎಂದು ಒತ್ತಾಯಿಸಿದರು. ಇದಕ್ಕೆ ವಿಪಕ್ಷ ಸದಸ್ಯರು, ಸರ್ಕಾರದ ವಿರುದ್ಧ ಪೋಸ್ಟರ್ ಹಿಡಿದು ಧಿಕ್ಕಾರ ಕೂಗಿದರು. ಸಭಾನಾಯಕ ಯತೀಂದ್ರ ಸಿದ್ದರಾಮಯ್ಯ ಮಾತನಾಡಿ, ಕಳಂಕಿತ ಸಚಿವ ಎಂದು ಬಳಸುವುದು ತಪ್ಪು. ನಾಗೇಂದ್ರ, ಅವರ ವಿರುದ್ಧ ಆರೋಪವಿದೆ. ಆದರೆ, ಇನ್ನೂ ಸಾಬೀತಾಗಿಲ್ಲ. ಈ ವಿಷಯವಾಗಿ ಉತ್ತರಿಸಲು ಸರ್ಕಾರ ಸಿದ್ಧವಿದೆ ಎಂದರು.

ಸಭಾಪತಿಗಳು ಮನವಿ ಮಾಡಿದರೂ ವಿಪಕ್ಷ ಸದಸ್ಯರು ಪ್ರತಿಭಟನೆ ಮುಂದುವರೆಸಿದರು. ಗದ್ದಲ ಹಾಗೂ ಗೊಂದಲ ನಡುವೆಯೂ ಪ್ರಶ್ನೋತ್ತರ ಕಲಾಪ ನಡೆಯಿತು. ಪ್ರತಿಪಕ್ಷಗಳ ಪ್ರತಿಭಟನೆ ಬಗ್ಗೆ ಅಕ್ರೋಶ ವ್ಯಕ್ತಪಡಿಸಿದ ಆರೋಗ್ಯ ಸಚಿವ ಯು.ಟಿ.ಖಾದರ್ ಅವರು ಚರ್ಚೆಗೆ ಬರುವಂತೆ ಆಗ್ರಹಿಸಿದರು. ಸಭಾನಾಯಕ ಯತೀಂದ್ರ, ಪರಿಶಿಷ್ಟ ಪಂಗಡದ ಸಚಿವರ ಮೇಲೆ ಯಾಕಿಷ್ಟು ಕೋಪ, ಅಸಹಿಷ್ಣುತೆ ಎಂದು ಪ್ರಶ್ನಿಸಿದರು.

ಅಷ್ಟೇ ಅಲ್ಲ ಈ ಬಗ್ಗೆ ಉತ್ತರ ಕೊಡಲು ನಾವು ಸಿದ್ದರಿದ್ದೇವೆ. ನಾಗೇಂದ್ರ, ವಿರುದ್ದದ ಆರೋಪ ಸಾಬೀತಾಗಿಲ್ಲ ಎಂದರು. ಮಧ್ಯಪ್ರವೇಶಿಸಿದ ಸಭಾಪತಿಗಳು, ಚರ್ಚೆ ಸಂಬಂಧ ಈವರೆಗೂ ನನಗೆ ಲಿಖಿತ ಪತ್ರ ನೀಡಿಲ್ಲ.

ಕರ್ನಾಟಕ ವಿಧಾನಪರಿಷತ್ ಕಾರ್ಯವಿಧಾನ ಹಾಗೂ ನಡವಳಿಕೆ 303ರ ವಿಧಿ ಪ್ರಕಾರ ಸದನದಲ್ಲಿ ಪೋಸ್ಟರ್, ಭಿತ್ತಿಪತ್ರ ಪ್ರದರ್ಶಿಸಬಾರದು. ನಾಳೆಯಿಂದ ಪೋಸ್ಟರ್ ಒಳಗೆ ಬಿಡದಂತೆ ಮಾರ್ಷಲ್‌ಗಳಿಗೆ ಸೂಚಿಸುವುದಾಗಿ ತಿಳಿಸಿದರು. ಉತ್ತರ ಕೊಡಲು ನಾವು ಸಿದ್ದರಿದ್ದೇವೆ. ಆಡಳಿತ ಹಾಗೂ ಪ್ರತಿಪಕ್ಷಗಳ ನಡುವಿನ ಆರೋಪ ಹಾಗೂ ಪ್ರತ್ಯಾರೋಪ ಹೆಚ್ಚಾಗುತ್ತಿದ್ದಂತೆ ಸದನವನ್ನ 10 ನಿಮಿಷಗಳ ಕಾಲ ಸಭಾಪತಿಗಳು ಮುಂದೂಡಿದರು.

### ರಾಜೀನಾಮೆಗೆ : ಬಿಜೆಪಿ ಧರಣಿ

**1** ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ 187 ಕೋಟಿಗೂ ಅಧಿಕ ಮೊತ್ತದ ಹಣ ಅಕ್ರಮ ಆರೋಪ

**2** ಬಿ. ನಾಗೇಂದ್ರ, ಅವರನ್ನು ಮತ್ತೆ ರಾಜ್ಯ ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡಿರುವುದನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಖಂಡಿಸಿದ್ದಾರೆ.

**3** ಪ್ರಕರಣ ನ್ಯಾಯಾಲಯದಲ್ಲಿ ಇರುವುದರಿಂದ ಅವರಿಗೆ ಸಚಿವ ಸ್ಥಾನ ನೀಡಿರುವುದು ತಪ್ಪಲ್ಲ ಎಂಬುವುದು ಕಾಂಗ್ರೆಸ್ ವಾದ

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅಕ್ರಮ ವರ್ಗಾವಣೆ ಹಾಗೂ ಅವ್ಯವಹಾರ ಪ್ರಕರಣವನ್ನು ಖಂಡಿಸಿ, ಪ್ರಕರಣದ ನೈತಿಕ ಹೊಣೆ ಹೊತ್ತು ಸಚಿವ ಬಿ. ನಾಗೇಂದ್ರ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಮಂಗಳವಾರ ನಗರದ ಅಂಬೇಡ್ಕರ್ ವೃತ್ತದ ಸಮೀಪದ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಯಿತು. ಧರಣಿಯಲ್ಲಿ ಮಾತನಾಡಿದ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ, ವಾಲ್ಮೀಕಿ ಅಭಿವೃದ್ಧಿ ನಿಗಮವು ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸುವ ಪ್ರಮುಖ ಸಂಸ್ಥೆಯಾಗಿದೆ. ನಿಗಮದ ಕೋಟ್ಯಂತರ ರೂಪಾಯಿ ಹಣವನ್ನು ಅಕ್ರಮವಾಗಿ ವಿವಿಧ ಖಾತೆಗಳಿಗೆ ವರ್ಗಾವಣೆ ಮಾಡಿರುವ ಆರೋಪ ಗಂಭೀರವಾಗಿದ್ದು, ಇದರಿಂದ ಹಿಂದುಳಿದ ವರ್ಗಗಳಿಗೆ ಕಾಂಗ್ರೆಸ್ ಸರ್ಕಾರ ಅನ್ಯಾಯ ಮಾಡಿರುವುದು ಸ್ಪಷ್ಟವಾಗುತ್ತದೆ ಎಂದು ಆರೋಪಿಸಿದರು. ಪ್ರಕರಣ ರಾಜ್ಯಾದ್ಯಂತ ಚರ್ಚೆಯಾಗುತ್ತಿದ್ದರೂ ಮುಖ್ಯಮಂತ್ರಿ ನೇತೃತ್ವದ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿದೆ ಎಂದು ಅವರು ದೂರಿದರು. ಪ್ರಕರಣದ ನೈತಿಕ ಹೊಣೆ ಹೊತ್ತು ಬಿ. ನಾಗೇಂದ್ರ ರಾಜೀನಾಮೆ ನೀಡಬೇಕು. ಅವ್ಯವಹಾರದಲ್ಲಿ ಭಾಗಿಯಾಗಿರುವ ಪ್ರತಿಯೊಬ್ಬರ ವಿರುದ್ಧವೂ ಕಠಿಣ ಕಾನೂನು ಕ್ರಮ ಕೈಗೊಂಡು, ಸಾರ್ವಜನಿಕರ ಹಣವನ್ನು ಸಂಪೂರ್ಣವಾಗಿ ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು.

### ಸಚಿವ ನಾಗೇಂದ್ರ, ರಾಜೀನಾಮೆಗೆ ಆಗ್ರಹ

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣಕಾಸು ಅಕ್ರಮಕ್ಕೆ ಸಂಬಂಧಿಸಿದಂತೆ ಬಳ್ಳಾರಿ ಉಸ್ತುವಾರಿ ಸಚಿವ ಬಿ. ನಾಗೇಂದ್ರ ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಬಳ್ಳಾರಿಯಲ್ಲಿ ಬಿಜೆಪಿ ವತಿಯಿಂದ ಆರಂಭಿಸಿರುವ ಅಹೋರಾತ್ರಿ ಧರಣಿ ಎರಡನೇ ದಿನವೂ ಮುಂದುವರಿದಿದೆ. ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಕಳೆದ ದಿನದಿಂದಲೇ ಧರಣಿ ನಡೆಸುತ್ತಿದ್ದು, ರಾತ್ರಿ ವೇಳೆಯೂ ಪ್ರತಿಭಟನೆ ಮುಂದುವರಿಸಿದರು. ಎರಡನೇ ದಿನವೂ ಧರಣಿ ನಡೆಸಿದ ಪ್ರತಿಭಟನಾಕಾರರು ಸಚಿವ ಬಿ. ನಾಗೇಂದ್ರ, ಅವರ ರಾಜೀನಾಮೆಗೆ ಒತ್ತಾಯಿಸಿ ಘೋಷಣೆಗಳನ್ನು ಕೂಗಿದರು.

### 87 ಕೋಟಿ ಹಗರಣ

ವಾಲ್ಮೀಕಿ ನಿಗಮದ ಅಧಿಕೃತ ಬ್ಯಾಂಕ್ ಖಾತೆಯಿಂದ ಸುಮಾರು 187 ಕೋಟಿಗೂ ಹೆಚ್ಚು ಹಣವನ್ನು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಎಂ.ಜಿ. ರಸ್ತೆ ಶಾಖೆಗೆ ವರ್ಗಾವಣೆ ಮಾಡಲಾಗಿತ್ತು. ಅಷ್ಟೇ ಅಲ್ಲದೆ, ಸುಮಾರು 88 ಕೋಟಿಗೂ ಅಧಿಕ ಹಣವನ್ನು ಹೈದರಾಬಾದ್ ಮೂಲದ ವಿವಿಧ ಶೆಲ್ ಕಂಪನಿ ಹಾಗೂ ಆಂಧ್ರಪ್ರದೇಶದ ಕೆಲವೊಂದು ವೈಯಕ್ತಿಕ ಖಾತೆಗಳಿಗೆ ವರ್ಗಾಯಿಸಲಾಗಿತ್ತು.

ಪ್ರಕರಣದ ತೀವ್ರತೆ ಹೆಚ್ಚಾಗುತ್ತಿದ್ದಂತೆ ಹಲವು ತನಿಖಾ ಸಂಸ್ಥೆಗಳು ರಂಗಕ್ಕಿಳಿದಿದ್ದವು. ರಾಜ್ಯ ಸರ್ಕಾರ ಈ ಪ್ರಕರಣದ ತನಿಖೆ ನಡೆಸಲು ಹಿರಿಯ ಐಪಿಎಸ್ ಅಧಿಕಾರಿಗಳ ನೇತೃತ್ವದಲ್ಲಿ ಎಸ್‌ಐಟಿ ರಚಿಸಿತ್ತು. ಬಳಿಕ ಸಿಬಿಐ ಪ್ರಕರಣ ದಾಖಲಿಸಿಕೊಂಡಿತು. ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಜಾರಿ ನಿರ್ದೇಶನಾಲಯ ತನಿಖೆ ಆರಂಭಿಸಿ, ಪ್ರಮುಖ ಸ್ಥಳಗಳ ಮೇಲೆ ದಾಳಿ ನಡೆಸಿತ್ತು.ಪ್ರಕರಣ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ ಬಿ ನಾಗೇಂದ್ರ ಅವರ ರಾಜೀನಾಮೆ ಪಡೆದುಕೊಳ್ಳಲಾಯಿತು. ನಂತರದಲ್ಲಿ ಬಿ ನಾಗೇಂದ್ರ ಬಂಧನಕ್ಕೊಳಗಾಗಿದ್ದರು. ಇದಾದ ಬಳಿಕ ಜಾಮೀನಿನ ಮೇಲೆ ಬಿಡುಗಡೆಗೊಂಡಿದ್ದಾರೆ. ಇದೀಗ ಡಿಕೆ ಶಿವಕುಮಾರ್ ಸರ್ಕಾರದಲ್ಲಿ ನಾಗೇಂದ್ರ ಅವರಿಗೆ ಸಚಿವ ಸ್ಥಾನ ನೀಡಲಾಗಿದೆ. ಆದರೆ ಅವರ ವಿರುದ್ಧ ಆರೋಪ ಇರುವ ಹಿನ್ನೆಲೆಯಲ್ಲಿ ಅವರನ್ನು ಸಂಪುಟದಿಂದ ವಜಾ ಮಾಡಬೇಕು ಎಂಬುವುದು ಬಿಜೆಪಿ ಬೇಡಿಕೆಯಾಗಿದೆ.



## ವಂದೇ ಮಾತರಂ ವಿರೋಧಿಸುವವರು ದೇಶ ಬಿಟ್ಟು ಹೋಗಿ: ಬಿಜೆಪಿ ಶಾಸಕ ಚನ್ನಬಸಪ್ಪ

• ಉದಯವಾಹಿನಿ, ಬೆಂಗಳೂರು

ವಂದೇ ಮಾತರಂ ಭಾರತದ ಅಸ್ಮಿತೆ. ಅದನ್ನು ವಿರೋಧಿಸುವವರು ದೇಶ ಬಿಟ್ಟು ಹೋಗಿ ಎಂದು ಬಿಜೆಪಿ ಶಾಸಕ ಚನ್ನಬಸಪ್ಪ ಗರಂ ಆಗಿದ್ದಾರೆ. ಸೋನಿಯಾಗಾಂಧಿ ಅವರಿಂದ ವಂದೇ ಮಾತರಂಗೆ ಅಪಮಾನ ವಿಚಾರವಾಗಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಶಾಸಕ, ವಂದೇ ಮಾತರಂ ವಿರೋಧಿಸುವ ಅನೇಕ ಜೀವಿಗಳು ಈ ದೇಶದಲ್ಲಿವೆ. ಸ್ವಾತಂತ್ರ್ಯ ಪೂರ್ವದಲ್ಲಿ ಕೂಡಾ ಇವರು ಈ ರೀತಿಯ ಚಟುವಟಿಕೆಗಳಿಗೆ ಶಕ್ತಿ ಕೊಡುತ್ತಿದ್ದರು. ದೇಶದ ಕಾನೂನು ವಿರೋಧ ಮಾಡಬಹುದು ಎಂಬ ಮಾನಸಿಕತೆ ಅಕ್ಷಮ್ಯ. ವಂದೇ ಮಾತರಂ ವಿರೋಧ ಮಾಡುವ ಮುಸ್ಲಿಮರು ದೇಶ ಬಿಟ್ಟು ಹೋಗಿ. ನಿಮಗೆ ಅಂತಾನೇ ಪ್ರತ್ಯೇಕ ದೇಶ ಇದೆ. ಯಾಕೆ ಬೇಕು ಈ ದೇಶ ನಿಮಗೆ ಹಾಗಾದರೆ ಎಂದು ಪ್ರಶ್ನಿಸಿದರು. ಸೋನಿಯ ಗಾಂಧಿ, ರಾಹುಲ್ ಗಾಂಧಿ ಕೂಡಾ ಈ ದೇಶದಲ್ಲಿ ಇರಕೂಡದು. ನೀವು ಕೂಡಾ ಮುಸಲ್ಮಾನರ ಜೊತೆ ತೊಲಗಿಬಿಡಿ. ಕಾಂಗ್ರೆಸ್ ನದ್ದು ಎಷ್ಟು ನೀಚತನದ ಪರಮಾವಧಿ. ಗೀತೆಯಲ್ಲಿ ದುರ್ಗೆ ಬರುತ್ತಾಳೆ ಅಂತಾ ವಂದೇ ಮಾತರಂ ತುಂಡು ಮಾಡಿದೆ. ಕಾಂಗ್ರೆಸ್ ಮುಸಲ್ಮಾನರಿಗಾಗಿ ಇರುವ ಕಾಂಗ್ರೆಸ್ ದೇಶಕ್ಕೆ ಅವಶ್ಯಕತೆ ಇಲ್ಲ ಎಂದು ವಾಗ್ದಾಳಿ ನಡೆಸಿದರು. ಅಲ್ಲಾಹ್ ಬಗ್ಗೆ ಹೇಳಿದಾಗ ಹಿಂದೂಗಳು ಸಹಿಸಿಕೊಂಡಿಲ್ವಾ? ಆಜಾನ್ ಕೂಗಿದಾಗ ಹಿಂದೂಗಳು ಸಹಿಸಿಕೊಂಡು ಸುಮ್ಮನೆ ಇಲ್ಲವೇ? ಕಾಂಗ್ರೆಸ್ ಹಿಂದೂ ವಿರೋಧಿ ಮನಸ್ಥಿತಿ ವಿರುದ್ಧ ಹೋರಾಟ ರೂಪಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಪ್ರಿಯಾಂಕ್ ಖರ್ಗೆಯವರೇ ಆರ್‌ಎಸ್‌ಎಸ್ ಬಗ್ಗೆ ನೀವು ಕಾನೂನು ತರುವ ಪ್ರಯತ್ನ ಮಾಡುತ್ತಿದ್ದೀರಿ. ಮುಸ್ಲಿಮರ ವಿರುದ್ಧ ಯಾವ ಕಾನೂನು ತಂದಿದ್ದೀರಿ ನೀವು? ಮುಸ್ಲಿಮರನ್ನು ನೀವು ಆರಾಧಿಸುತ್ತೀರಾ? ನಿಮಗೆ ಹಿಂದೂಸ್ಥಾನದ ಧಿಕ್ಕಾರ ಇದೆ.

## ಸರ್ಕಾರಕ್ಕೆ ಶೀಘ್ರವೇ ಬಿಜೆಪಿ ಬರಗಾಲ ಅಧ್ಯಯನ ವರದಿ ಸಲ್ಲಿಕೆ: ಎನ್.ರವಿಕುಮಾರ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರಕ್ಕೆ ಬಿಜೆಪಿ ತಂಡಗಳ ಬರಗಾಲ ಅಧ್ಯಯನ ಸಂಬಂಧಿತ ವರದಿಯನ್ನು ಶೀಘ್ರವೇ ಸಲ್ಲಿಸಲಾಗುವುದು ಎಂದು ವಿಧಾನ ಪರಿಷತ್ತಿನ ವಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ್ ತಿಳಿಸಿದ್ದಾರೆ. ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಬರಗಾಲದ ಅಧ್ಯಯನಕ್ಕೆ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು 6 ತಂಡಗಳನ್ನು ರಚಿಸಿದ್ದರು. ತಂಡಗಳು ಜಿಲ್ಲೆಗಳು ಮಾತ್ರವಲ್ಲದೇ ಕೆಲವು ತಾಲ್ಲೂಕುಗಳಿಗೂ ಭೇಟಿ ನೀಡಿವೆ ಎಂದು ವಿವರಿಸಿದರು. ರಾಜ್ಯದಲ್ಲಿ ಭೀಕರ ಬರಗಾಲ ಇದೆ. ರಾಜ್ಯ ಸರ್ಕಾರ ನಯಾಪೈಸೆ ಬಿಡುಗಡೆ ಮಾಡಿಲ್ಲ ಎಂಬ ವಿಚಾರವನ್ನು ಗಮನಕ್ಕೆ ತರಲು ಉದ್ದೇಶಿಸಲಾಗಿದೆ. ರೈತರು ಸಂಕಷ್ಟದಲ್ಲಿದ್ದಾರೆ. ಅದರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕೆಂದು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಈ ಸಂಬಂಧ ವರದಿಯನ್ನು ಸಿದ್ಧಪಡಿಸಿದ್ದು, ಅದನ್ನು ಪಕ್ಷದ ರಾಜ್ಯಾಧ್ಯಕ್ಷರಿಗೆ ಸಲ್ಲಿಸುತ್ತಿರುವುದಾಗಿ ಹೇಳಿದರು.

## 2026ರ ಗಣಿ ಖನಿಜ ತಿದ್ದುಪಡಿ ಮಸೂದೆ ವಿಚಾರ; ಮೋದಿ, ಕೇಂದ್ರ ಸಚಿವರಿಗೆ ಪರಮೇಶ್ವರ್ ಪತ್ರ

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ.ಕಿಶನ್ ರೆಡ್ಡಿಗೆ ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ್ ಪತ್ರ ಬರೆದಿದ್ದಾರೆ. 2026ರ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ತಿದ್ದುಪಡಿ ಮಸೂದೆಯನ್ನು ಕೇಂದ್ರ ಸರ್ಕಾರವು ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ.

ಖನಿಜ ಹಕ್ಕುಗಳು ಮತ್ತು ಖನಿಜ ಸಮೃದ್ಧ ಭೂಮಿಗಳ ಮೇಲೆ ತೆರಿಗೆ ವಿಧಿಸುವ ರಾಜ್ಯಗಳ ಸಾಂವಿಧಾನಿಕ ಅಧಿಕಾರವನ್ನು ನಿರ್ಬಂಧಿಸುವ ಮಸೂದೆಯ ನಿಬಂಧನೆಗಳಿಗೆ ಪರಮೇಶ್ವರ್ ಅಸಮಾಧಾನ ರಾಜ್ಯ ಪಟ್ಟಿಯ 49 ಮತ್ತು 50 ನೇ ನಮೂದುಗಳ ಅಡಿಯಲ್ಲಿ ರಾಜ್ಯಗಳ ಶಾಸಕಾಂಗ ಮತ್ತು ಹಣಕಾಸು ಅಧಿಕಾರಗಳನ್ನು ದೃಢಪಡಿಸುವ ಸುಪ್ರೀಂ ಕೋರ್ಟ್‌ನ 2024 ರ ಮಹತ್ವದ ತೀರ್ಪನ್ನು ಅವರು ಉಲ್ಲೇಖಿಸಿದ್ದಾರೆ. ಏಕಪಕ್ಷೀಯ ನಿಲುವು ಭಾರತದ ಒಕ್ಕೂಟ ರಚನೆಗೆ ಗಂಭೀರ ಕಳವಳಕಾರಿ ವಿಷಯವಾಗಿದೆ.

## 1.08 ಕೋಟಿ ಮತದಾರರ ಹೆಸರು ಡಿಲೀಟ್?

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಮನೆ ಮನೆ ಸಮೀಕ್ಷೆ ಇಂದು ಮುಕ್ತಾಯವಾಗಿದ್ದು 1.08 ಕೋಟಿ ಮತದಾರರ ಹೆಸರು ಡಿಲೀಟ್ ಆಗಿದೆ. ಒಟ್ಟು 1,08,31,945 ಅಂದರೆ 19.54% ರಷ್ಟು ಮತದಾರರನ್ನುಗೈರು, ಸ್ಥಳಾಂತರಗೊಂಡವರು, ಮೃತರು, ನಕಲಿ ಮತ್ತು ಇತರರು ಪಟ್ಟಿಗೆ ಸೇರಿಸಲಾಗಿದೆ.


5.54 ಕೋಟಿ ಎನಮ್ಯೂರೇಷನ್ ಫಾರಂ ವಿತರಣೆ ಮಾಡಲಾಗಿದ್ದು, 4.46 ಕೋಟಿ ಫಾರಂ ಡಿಜಿಟಲೈಸೇಷನ್ ಅಂದರೆ 80.46% ಡಿಜಿಟಲೈಸೇಷನ್ ಆಗಿದೆ. ಬೆಂಗಳೂರಿನಲ್ಲಿ ಒಟ್ಟು ಮತದಾರರು 1.08 ಕೋಟಿ ಮತದಾರರ ಪೈಕಿ 56.73 ಲಕ್ಷ ಮತದಾರರ ಡಿಜಿಟಲೈಸೇಷನ್ ಆಗಿದೆ. ಬಾಕಿ 47 ಲಕ್ಷದ 15 ಸಾವಿರದ 188 ಮತದಾರರನ್ನು ಎಡಿಎಸ್‌ಎಸ್‌ಓ ಎಂದು ಗುರುತಿಸಲಾಗಿದೆ. ಮತಗಟ್ಟೆಗಳ ತಾರ್ಕಿಕ ಮರುಹೊಂದಾಣಿಕೆ ಕಾರ್ಯ ಆರಂಭವಾಗಲಿದೆ.


## ಮತ್ತೆ ಖಾತೆ ಬದಲಾವಣೆ: ಕೃಷ್ಣಬೈರೇಗೌಡಗೆ ಹೆಚ್ಚುವರಿ ಹೊಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸಚಿವ ಸಂಪುಟದಲ್ಲಿ ಮಂಗಳವಾರ ಕೆಲ ಬದಲಾವಣೆಗಳನ್ನು ಮಾಡಲಾಗಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಳಿ ಇದ್ದ ಸಂಸದೀಯ ವ್ಯವಹಾರಗಳ ಖಾತೆಯನ್ನು ಕೃಷ್ಣಬೈರೇಗೌಡ ಅವರಿಗೆ ನೀಡಲಾಗಿದೆ. 'ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಶಿಫಾರಸಿನಂತೆ ರಾಜ್ಯಪಾಲ ಥಾವರ್‌ಚಂದ್ ಗೆಹಲೋತ್ ಅವರು ಸಚಿವರ ಖಾತೆಗಳ ಮರುಹಂಚಿಕೆ ಮಾಡಿದ್ದಾರೆ' ಎಂದು ಲೋಕಭವನದ ಪ್ರಕಟಣೆ ತಿಳಿಸಿದೆ.

ಕೃಷ್ಣ ಬೈರೇಗೌಡ ಅವರು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಖಾತೆಯನ್ನೂ ವಹಿಸಿಕೊಂಡಿದ್ದಾರೆ. ಬಿಡಿಎ, ಬಿಎಂಆರ್‌ಡಿಎ ಹೊರತುಪಡಿಸಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ), ಐದು ನಗರ ಪಾಲಿಕೆಗಳು, ಬೆಂಗಳೂರು ಜಲಮಂಡಳಿ, ಮೆಟ್ರೊ ಮಾತ್ರ 'ಗ್ರೇಟರ್ ಬೆಂಗಳೂರು ಅಭಿವೃದ್ಧಿ' ಖಾತೆಗೆ ಹಂಚಲಾಗಿದೆ. ಸದ್ಯ ಡಿಕೆಶಿ ಬಳಿ ಹಣಕಾಸು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಗುಪ್ತಚರ, ಕಾನೂನು ಮತ್ತು ಹಂಚಿಕೆಯಾಗದ ಖಾತೆಗಳಿವೆ.





ಮುಖ್ಯಮಂತ್ರಿಯಾಗಿ ಶಿವಕುಮಾರ್ ಜೂನ್ 3ರಂದು ಪ್ರಮಾಣವಚನ ಸ್ವೀಕರಿಸಿದಾಗ ಅವರ ಜೊತೆ 13 ಸಚಿವರು ಸಂಪುಟ ಸೇರಿದ್ದರು. ಒಂದು ತಿಂಗಳ ಬಳಿಕ, ಜುಲೈ 3ರಂದು ಸಂಪುಟ ವಿಸ್ತರಣೆ ಆಗಿತ್ತು.ಬಳಿಕ ಆಗಸ್ಟ್ 13ರಂದು ಡಿಕೆಶಿ ನೇತೃತ್ವದ ಸರ್ಕಾರದ 19 ನೂತನ ಸಚಿವರಿಗೆ ವಿಧಾನಮಂಡಲದ ಅಧಿವೇಶನ ಆರಂಭವಾಗುವುದಕ್ಕೂ ಒಂದು ದಿನ ಮೊದಲು ಖಾತೆ ಹಂಚಿಕೆಯಾಗಿತ್ತು. ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ, ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಬೇಡಿಕೆಯಂತೆ ಅವರ ಖಾತೆಗಳನ್ನು ಬದಲಾವಣೆ ಮಾಡಲಾಗಿತ್ತು.

**ಖಾತೆಯ ಪಟ್ಟಿಗೆ ಅನುಮೋದನೆ**

ಶಿವಕುಮಾರ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಮೊದಲ ಅಧಿವೇಶನ ಆರಂಭವಾಗಿದೆ. ಸಂಪುಟ ವಿಸ್ತರಣೆಯಾದ ಬಳಿಕ ಖಾತೆ ಹಂಚಿಕೆಯು ಕಗ್ಗಂಟಾಗಿತ್ತು. ಹೀಗಾಗಿ, ಅಧಿವೇಶನದಲ್ಲಿ ನಿರ್ದಿಷ್ಟ ಇಲಾಖೆಗೆ ಸಂಬಂಧಿಸಿದಂತೆ ಸದಸ್ಯರು ಕೇಳುವ ಪ್ರಶ್ನೆಗಳಿಗೆ ಯಾವ ಸಚಿವರು ಉತ್ತರ ನೀಡಬೇಕು ಎಂಬ ಪ್ರಶ್ನೆಯೂ ಎದುರಾಗಿತ್ತು. ಖಾತೆ ಇಲ್ಲದ ಸಚಿವ ಸಂಪುಟದ ಬಗ್ಗೆ ವಿರೋಧ ಪಕ್ಷಗಳು ಟೀಕೆಯನ್ನೂ ಮಾಡಿದ್ದವು. ಕಾಂಗ್ರೆಸ್ ಹೈಕಮಾಂಡ್ ಅಳೆದೂ ತೂಗಿ, ಸಚಿವರಿಗೆ ವಹಿಸಬೇಕಾದ ಖಾತೆಯ ಪಟ್ಟಿಗೆ ಅನುಮೋದನೆ ನೀಡಿತ್ತು. ಈ ಬೆನ್ನಲ್ಲೇ ಮುಖ್ಯಮಂತ್ರಿ ಶಿಫಾರಸು ಅನ್ವಯ ರಾಜ್ಯಪಾಲರು ಅಂಕಿತ ಹಾಕಿದ್ದರು. ರಾಮಲಿಂಗಾ ರೆಡ್ಡಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಖಾತೆಯೇ ಬೇಕೆಂದು ಪಟ್ಟು ಹಿಡಿದಿದ್ದರು. ಅದನ್ನು ಕೃಷ್ಣಬೈರೇಗೌಡ ಅವರಿಗೆ ನೀಡಲಾಗಿತ್ತು. ಇದರಿಂದ ಮುನಿಸಿಕೊಂಡಿದ್ದ ರೆಡ್ಡಿ ಅವರು ರಾಜೀನಾಮೆಗೂ ಮುಂದಾಗಿದ್ದರು. ಅವರಿಗೆ ಈಗ ಅರಣ್ಯ ಮತ್ತು ಪರಿಸರ ಖಾತೆ ನೀಡಲಾಗಿದೆ.

## ಶೀಘ್ರವೇ ಬಸ್ ಪ್ರಯಾಣ ದರ ಹೆಚ್ಚಳ: ಸಾರಿಗೆ ಸಚಿವ ಬೈರತಿ ಸುರೇಶ್ ಸುಳಿವು

• ಉದಯವಾಹಿನಿ, ಬೆಂಗಳೂರು

ಡೀಸೆಲ್ ಬೆಲೆ ಹೆಚ್ಚಳವಾಗಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಸರ್ಕಾರಿ ಬಸ್ ಪ್ರಯಾಣ ದರ ಹೆಚ್ಚಳ ಮಾಡುವ ಕುರಿತು ಸಾರಿಗೆ ಸಚಿವ ಬೈರತಿ ಸುರೇಶ್ ಸುಳಿವು ನೀಡಿದ್ದಾರೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಸುರೇಶ್, 'ಕರ್ನಾಟಕ ಸಾರ್ವಜನಿಕ ಸಾರಿಗೆ ದರ ನಿಯಂತ್ರಣ ಸಮಿತಿ ಅಧ್ಯಕ್ಷ ಅತುಲ್ ಕುಮಾರ್ ತಿವಾರಿ ಅವರ ನೇತೃತ್ವದಲ್ಲಿ ಟಿಕೆಟ್ ದರಗಳ ಕುರಿತು ಪರಿಶೀಲನೆ ನಡೆಸಿ ವರದಿ ಸಲ್ಲಿಸಲು ಸೂಚಿಸಲಾಗಿದೆ' ಎಂದು ತಿಳಿಸಿದ್ದಾರೆ.

'ನಾವು ಅತುಲ್ ತಿವಾರಿ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿದ್ದೇವೆ. ಸಮಿತಿ ರಚನೆಯಾಗಿ ಈಗಾಗಲೇ ಸುಮಾರು 20 ದಿನಗಳು ಕಳೆದಿವೆ. ಅವರು ಎಲ್ಲಾ ನಾಲ್ಕೂ ಸಾರಿಗೆ ನಿಗಮಗಳು ಹಾಗೂ ವಿವಿಧ ಸ್ಥಳಗಳಿಗೆ ಭೇಟಿ ನೀಡುತ್ತಿದ್ದಾರೆ. ಶೀಘ್ರದಲ್ಲೇ ವರದಿ ಸಲ್ಲಿಸಲಿದ್ದಾರೆ' ಎಂದಿದ್ದಾರೆ. ವರದಿ ಸಲ್ಲಿಸಿದ ಬಳಿಕ ಬಸ್ ಪ್ರಯಾಣ ದರ ಏರಿಕೆ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ಸಚಿವರು ಹೇಳಿದ್ದಾರೆ. 'ನಾವು ಈ ವರದಿಯನ್ನು ಸಂಪುಟ ಸಭೆಯ ಮುಂದೆ ಇಟ್ಟು, ನಂತರ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತೇವೆ' ಎಂದು ಅವರು ತಿಳಿಸಿದ್ದಾರೆ. 'ಕಳೆದ ಬಾರಿ ಬಸ್ ಪ್ರಯಾಣ ದರ ಪರಿಷ್ಕರಣೆಯಾದ ನಂತರ ಡೀಸೆಲ್ ಬೆಲೆ ಗಣನೀಯವಾಗಿ ಏರಿಕೆಯಾಗಿದೆ.

## ವರಮಹಾಲಕ್ಷ್ಮಿ ಹಬ್ಬಕ್ಕೆ ಖರೀದಿ: ಗಗನಕ್ಕೇರಿದ ಅಗತ್ಯ ವಸ್ತುಗಳ ಬೆಲೆ

• ಉದಯವಾಹಿನಿ, ಬೆಂಗಳೂರು

ಶ್ರಾವಣ ಮಾಸದ ಮೊದಲನೇ ಸಂಭ್ರಮದ ಹಬ್ಬ ವರಮಹಾಲಕ್ಷ್ಮಿ ಹಬ್ಬಕ್ಕೆ ರಾಜ್ಯಾದ್ಯಂತ ಭರ್ಜರಿ ಸಿದ್ಧತೆ ನಡೆಯುತ್ತಿದ್ದು, ಬೆಲೆ ಏರಿಕೆಯ ಬಿಸಿ ಗ್ರಾಹಕರಿಗೆ ತಟ್ಟಿದೆ. ಲಕ್ಷ್ಮಿ ದೇವಿಯನ್ನು ಮನೆ ತುಂಬಿಸಿಕೊಳ್ಳಲು ಮಹಿಳೆಯರು ಕಾತುರದಿಂದ ಕಾಯುತ್ತಿದ್ದು, ಕಳೆದ ಒಂದು ವಾರದಿಂದಲೇ ಹಬ್ಬದ ಸಿದ್ಧತಾ ಕಾರ್ಯಗಳು ಭರದಿಂದ ಸಾಗಿವೆ.

ಬರದ ಛಾಯೆಯ ನಡುವೆಯೂ ಮಾರುಕಟ್ಟೆಗಳಿಗೆ ಅಗತ್ಯ ವಸ್ತುಗಳ ಖರೀದಿಗೆ ಜನರು ಮುಗಿ ಬೀಳುತ್ತಿದ್ದು, ಬೆಲೆಗಳು ಕಣ್ಣು ಕೆಂಪಾಗಿಸಿದೆ. ಹಬ್ಬಗಳ ಸಂದರ್ಭದಲ್ಲಿ ಹೂ, ಹಣ್ಣು, ತರಕಾರಿ, ದಿನಸಿ ಬೆಲೆ ಏರಿಕೆ ಸಾಮಾನ್ಯ. ಆದರೆ ಈ ಬಾರಿ ವರಲಕ್ಷ್ಮಿ ಹಬ್ಬಕ್ಕೆ ಎಲ್ಲವೂ ದುಪ್ಪಟ್ಟಾಗಿದ್ದು, ಗ್ರಾಹಕರಿಗೆ ವರಮಹಾಲಕ್ಷ್ಮಿ ದುಬಾರಿಯಾಗಿದ್ದಾಳೆ. ಹಬ್ಬಕ್ಕಿನ್ನೇನು ಎರಡೇ ದಿನ ಬಾಕಿ ಉಳಿದಿದ್ದು, ಅಗತ್ಯ ವಸ್ತುಗಳ ಖರೀದಿಯಲ್ಲಿ ಸಾರ್ವಜನಿಕರು ಮಗ್ನರಾಗಿದ್ದಾರೆ. ಬಟ್ಟೆ ಅಂಗಡಿಗಳು, ಗ್ರಂಧಿಗೆ, ಫ್ಯಾನ್ಸಿಸ್ಟೋರ್‌ಗಳಲ್ಲಿ ಜನವೋ ಜನ. ಮನೆಗಳಲ್ಲಿ ವರಮಹಾಲಕ್ಷ್ಮಿಯನ್ನು ಪ್ರತಿಷ್ಠಾಪನೆಗೆ ಬೇಕಾದ ಸೀರೆ, ಅರಿಶಿನ, ಕುಂಕುಮ, ಲಕ್ಷ್ಮಿದೇವಿಯ ಮುಖವಾಡಗಳು, ಬಳೆ, ಪೂಜಾ ಸಾಮಗ್ರಿ, ಅಲಂಕಾರಿಕ ವಸ್ತುಗಳ ಖರೀದಿ ಜೋರಾಗಿದೆ.

## ನೀಟ್ ಪ್ರತಿಭಟನೆಯಲ್ಲಿ 2873 ಕ್ರಿಮಿನಲ್‌ಗಳು ಭಾಗಿ, 240 ಪೊಲೀಸರಿಗೆ ಗಾಯ: ಸುಪ್ರೀಂಕೋರ್ಟ್‌ಗೆ ದೆಹಲಿ ಪೊಲೀಸರ ಮಾಹಿತಿ

• ಉದಯವಾಹಿನಿ, ನವದೆಹಲಿ

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ಜುಲೈ 20 ರಂದು ಯುವಕರು ನಡೆಸಿದ ಸಂಸದ್ ಚಲೋ ಪ್ರತಿಭಟನೆ ವೇಳೆ ಸಮಾಜ ವಿರೋಧಿ ವ್ಯಕ್ತಿಗಳು, ಅಪರಾಧ ಹಿನ್ನೆಲೆ ಉಳ್ಳವರು ಭಾಗಿಯಾಗಿದ್ದರು. ಇದರಿಂಧ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟು, ಅಂದು ನಡೆದ ಹಿಂಸಾತ್ಮಕ ಘಟನೆಗಳಲ್ಲಿ 240ಕ್ಕೂ ಅಧಿಕ ಪೊಲೀಸರು ಗಾಯಗೊಂಡಿದ್ದಾರೆ ಎಂದು ದೆಹಲಿ ಪೊಲೀಸರು ಸುಪ್ರೀಂಕೋರ್ಟ್‌ಗೆ ತಿಳಿಸಿದ್ದಾರೆ.

ಯುವ ಪ್ರತಿಭಟನಾಕಾರರ ಮೇಲೆ ಬಲಪ್ರಯೋಗ ನಡೆಸಲಾಗಿದೆ ಎಂದು ಆರೋಪಿಸಿ ಸಲ್ಲಿಸಲಾದ ಅರ್ಜಿಗಳಿಗೆ ಸಂಬಂಧಿಸಿದಂತೆ ಅಫಿಡವಿಟ್ ಸಲ್ಲಿಸಿರುವ ದೆಹಲಿ ಪೊಲೀಸರು, ತಮ್ಮ ಕ್ರಮವನ್ನು ಬಲವಾಗಿ ಸಮರ್ಥಿಸಿಕೊಂಡಿದ್ದಾರೆ. ಜೊತೆಗೆ ನ್ಯಾಯಾಲಯ ನೇಮಿಸಿದ ಸಮಿತಿಯಿಂದ ತಾವು ವಿಚಾರಣೆ ಒಳಪಡಲು ಸಿದ್ಧವಿದ್ದೇವೆ ಎಂದು ಹೇಳಿದ್ದಾರೆ. **ಅಫಿಡವಿಟ್‌ನಲ್ಲಿ ಏನಿದೆ:** ದೆಹಲಿ ಪೊಲೀಸರು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದ ಅಫಿಡವಿಟ್‌ನಲ್ಲಿ ತಮ್ಮ ಅಂದಿನ ಕ್ರಮವನ್ನು ಸಮರ್ಥಿಸಿಕೊಂಡಿದ್ದಾರೆ. ಜೊತೆಗೆ, ನ್ಯಾಯಾಲಯದ ತನಿಖಾ ಸಮಿತಿಯಿಂದ ವಿಚಾರಣೆ ಎದುರಿಸಲು ಸಿದ್ಧ. ಅಂದಿನ ಹೋರಾಟದಲ್ಲಿ ಬಾಹ್ಯಶಕ್ತಿಗಳು ಭಾಗಿಯಾಗಿ, ದಾಂಧಲೆ,




ಹಿಂಸೆ ಸೃಷ್ಟಿಸಿದ್ದರು ಎಂದು ತಿಳಿಸಿದ್ದಾರೆ. ಜುಲೈ 20ರಂದು ಜಂತರ್ ಮಂತರ್ ಮತ್ತು ಅದರ ಸುತ್ತಮುತ್ತ ನಡೆದ ಪ್ರತಿಭಟನೆಯ ಸಮಯದಲ್ಲಿ ದುಷ್ಕರ್ಮಿಗಳು ಮತ್ತು ಸಮಾಜ ವಿರೋಧಿ ವ್ಯಕ್ತಿಗಳು ಸೇರಿದಂತೆ 30 ಸಾವಿರಕ್ಕೂ ಹೆಚ್ಚು ಜನರು ಜಮಾಯಿಸಿದ್ದರು. ಭಾರಿ ಜನರ ಜಮಾವಣೆಯಿಂದ ಹಿಂಸಾತ್ಮಕ ಪ್ರತಿಭಟನೆ ನಡೆಯಿತು ಎಂದು ಅಫಿಡವಿಟ್‌ನಲ್ಲಿ ತಿಳಿಸಲಾಗಿದೆ. ಸಂಸತ್ತಿಗೆ ಮುತ್ತಿಗೆ ಪ್ರತಿಭಟನಾಕಾರರು ಯತ್ನಿಸಿದರು. ಈ ಕುರಿತು ಹಲವು ಬಾರಿ ಎಚ್ಚರಿಕೆ ನೀಡಿ, ಹಿಂದೆ ಸರಿಯಲು ತಿಳಿಸಲಾಯಿತು. ಆದಾಗ್ಯೂ ಪ್ರತಿಭಟನಾಕಾರರು ಸಂಸತ್ತಿನ ಕಡೆಗೆ ಮುನ್ನುಗ್ಗುತ್ತಿದ್ದಾಗ ಪೊಲೀಸರು ಕ್ರಮ ಕೈಗೊಂಡರು. ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಪ್ರತಿಭಟನಾಕಾರರ ಪೈಕಿ 2,873 ಮಂದಿ ಅಧಿಕೃತ ಪೊಲೀಸ್ ದಾಖಲೆಗಳ ಪ್ರಕಾರ ಅಪರಾಧ ಹಿನ್ನೆಲೆ ಹೊಂದಿದವರಾಗಿದ್ದಾರೆ ಎಂದು ಅದರಲ್ಲಿ ಉಲ್ಲೇಖಿಸಲಾಗಿದೆ.

ಇದರಲ್ಲಿ 92 ಮಂದಿ 10ಕ್ಕೂ ಹೆಚ್ಚು ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ. 47 ವ್ಯಕ್ತಿಗಳು ಗಂಭೀರ ಅಪರಾಧ ಹಿನ್ನೆಲೆ ಹೊಂದಿದ್ದಾರೆ. ಶಾಂತಿಯುತವಾಗಿ ಪ್ರತಿಭಟಿಸುವ ಹಕ್ಕು ಪ್ರತಿಯೊಬ್ಬ ನಾಗರಿಕನಿಗಿದೆ. ಆದರೆ, ಶಾಂತಿಯುತ ಪ್ರತಿಭಟನೆಯು ಹಿಂಸೆಗೆ ತಿರುಗಿ ನಾಗರಿಕರು ಹಾಗೂ ಪೊಲೀಸ್ ಸಿಬ್ಬಂದಿಗೆ ಹಾನಿ ಉಂಟು ಮಾಡಲಾಗಿದೆ. ಸಾರ್ವಜನಿಕ ಆಸ್ತಿ ನಾಶ ಮಾಡಲಾಗಿದೆ ಎಂದು ಅಫಿಡವಿಟ್‌ನಲ್ಲಿ ಹೇಳಲಾಗಿದೆ. ಹಿಂಸಾಚಾರ ನಿಲ್ಲದಿದ್ದಾಗ, ಅದು ಇನ್ನಷ್ಟು ಹೆಚ್ಚಾಗದಂತೆ ತಡೆಯಲು ಕನಿಷ್ಠ ಬಲಪ್ರಯೋಗ ನಡೆಸುವುದು ಸಾಮಾನ್ಯ. ಪರಿಸ್ಥಿತಿಗೆ ಅನುಗುಣವಾಗಿ ಅಂದು ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಪೊಲೀಸರು ತಮ್ಮ ಕ್ರಮವನ್ನು ಸಮರ್ಥಿಸಿಕೊಂಡಿದ್ದಾರೆ.

### ಏಕಾಂಗಿ ಪೊಲೀಸರ ಮೇಲೆ ಗುಂಪು ದಾಳಿ

240ಕ್ಕೂ ಹೆಚ್ಚು ಪೊಲೀಸರು ಗಾಯಗೊಂಡಿದ್ದಾರೆ. ಪ್ರತಿಭಟನಾಕಾರರಲ್ಲಿಯೂ ಕೆಲವರು ಗಾಯಗೊಂಡಿದ್ದಾರೆ. ಎರಡೂ ಕಡೆಗಳಲ್ಲಿ ಹಾನಿಯಾಗಿದ್ದು, ನಿಷ್ಪಕ್ಷಪಾತವಾಗಿ ತನಿಖೆ ಮಾಡಬೇಕು. ನ್ಯಾಯಾಂಗ ಸೂಚಿಸುವ ಯಾವುದೇ ವಿಚಾರಣೆಗೂ ಪೊಲೀಸ್ ಇಲಾಖೆ ಸಿದ್ಧವಾಗಿದೆ ಎಂದು ಅಫಿಡವಿಟ್‌ನಲ್ಲಿ ಹೇಳಲಾಗಿದೆ.

ಸಿಜೆಪಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಗೆ ನೀಡಲಾದ ಅನುಮತಿ ಜುಲೈ 20ಕ್ಕೆ ಮುಗಿದಿತ್ತು. ಅದರ ನಂತರವೂ ಪ್ರತಿಭಟನಾಕಾರರು ಧರಣಾ ಸ್ಥಳದಿಂದ ಹೊರಬರಲಿಲ್ಲ ಅಥವಾ ಚದುರಿಹೋಗಲಿಲ್ಲ ಎಂದು ಅಫಿಡವಿಟ್‌ನಲ್ಲಿ ತಿಳಿಸಲಾಗಿದೆ. ಪ್ರತಿಭಟನಾಕಾರರ ಗುಂಪು ಏಕಾಂಗಿಯಾಗಿ ಭದ್ರತೆ ನೀಡುತ್ತಿದ್ದ ಪೊಲೀಸ್ ಅಧಿಕಾರಿಗಳ ಮೇಲೆ ಕಲ್ಲು, ದೊಣ್ಣೆಗಳಿಂದ ಹಲ್ಲೆ ಮಾಡಲಾಗಿದೆ.



ಈ ಕುರಿತ ದೃಶ್ಯಗಳು, ಡಿಜಿಟಲ್ ದಾಖಲೆ ಲಭ್ಯವಿದೆ ಎಂದು ಸುಪ್ರೀಂ ಕೋರ್ಟ್‌ಗೆ ತಿಳಿಸಲಾಗಿದೆ.

## ಮುಂದಿನ 4 ದಿನಗಳಲ್ಲಿ ಕರ್ನಾಟಕ ಸೇರಿ ದೇಶದ ವಿವಿಧೆಡೆ ಉತ್ತಮ ಮಳೆ

• ಉದಯವಾಹಿನಿ, ನವದೆಹಲಿ

ಕರ್ನಾಟಕ ಸೇರಿದಂತೆ ದೇಶದ ಹಲವು ಭಾಗಗಳಲ್ಲಿ ಆಗಸ್ಟ್ 22 ರವರೆಗೆ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ. ಅದರಲ್ಲೂ, ಪೂರ್ವ ರಾಜಸ್ಥಾನ, ಹಿಮಾಚಲ ಪ್ರದೇಶ, ಉತ್ತರ ಪ್ರದೇಶ ಮತ್ತು ಛತ್ತೀಸ್ ಗಢಕ್ಕೆ ಎಚ್ಚರಿಕೆ ನೀಡಲಾಗಿದೆ. ಪೂರ್ವ ಪ್ರದೇಶದಲ್ಲಿ ವಾಯುಭಾರ ಕುಸಿತ ಉಂಟಾಗುವುದರಿಂದ ಒಡಿಶಾ, ಜಾರ್ಖಂಡ್ ಮತ್ತು ಬಿಹಾರದಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಐಎಂಡಿ ವಿಜ್ಞಾನಿ ಅಖಿಲ್ ಶ್ರೀವಾಸ್ತವ ಹೇಳಿದ್ದಾರೆ. ಪಶ್ಚಿಮ-ವಾಯುವ್ಯ ದಿಕ್ಕಿಗೆ ಮಾನ್ಸೂನ್‌ಗಳು ಚಲಿಸುವ ನಿರೀಕ್ಷೆಯಿದೆ. ಪೂರ್ವ ಮತ್ತು ಮಧ್ಯ ಭಾರತದ ಕೆಲವು ಭಾಗಗಳಲ್ಲಿ ಮಳೆಯ ಚಟುವಟಿಕೆ ಬಲವಾಗಿರುತ್ತದೆ ಎಂದು ಅವರು ಹೇಳಿದರು. ಐಎಂಡಿ ಪ್ರಕಾರ, ಪಶ್ಚಿಮ ಬಂಗಾಳ, ಜಾರ್ಖಂಡ್, ಬಿಹಾರ ಮತ್ತು ಒಡಿಶಾದಲ್ಲಿ ವ್ಯಾಪಕ ಮಳೆಯಾಗುವ ನಿರೀಕ್ಷೆಯಿದೆ. ಬಂಗಾಳಕೊಲ್ಲಿ ಮತ್ತು ಪಕ್ಕದ ಕರಾವಳಿ ಪ್ರದೇಶಗಳಲ್ಲಿ ಆಗುತ್ತಿರುವ ವಾಯುಭಾರ ಕುಸಿತವು ಮಳೆಗೆ ಪ್ರಮುಖ ಕಾರಣವಾಗುವ ಸಾಧ್ಯತೆಯಿದೆ.

ಈ ಅವಧಿಯಲ್ಲಿ ದೆಹಲಿಯಲ್ಲಿ ಸಾಮಾನ್ಯ ಮಾನ್ಸೂನ್ ಮಳೆಯಾಗುವ ನಿರೀಕ್ಷೆಯಿದೆ. ಆದರೆ, ವ್ಯಾಪಕ ಭಾರಿ ಮಳೆಯಾಗುವ ಸಾಧ್ಯತೆಯಿಲ್ಲ. ಕೆಲವು ಪ್ರದೇಶಗಳಲ್ಲಿ ಹಗುರವಾದ ಮಳೆ ಮತ್ತು ಮೋಡ ಕವಿದ ವಾತಾವರಣ ಉಂಟಾಗಬಹುದು. ಇದು ಶಾಖದಿಂದ ಸ್ವಲ್ಪ ಪರಿಹಾರವನ್ನು ನೀಡುತ್ತದೆ.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 15,589/Gram 24ct ₹ 14,290 /Gram 22ct ಬೆಳ್ಳಿ: ₹250.00/

# ಮೃತರು ಬೇಟೆಗಾರರೆಂದು ದೃಢಪಟ್ಟರೆ ಪರಿಹಾರವಿಲ್ಲ: ಸಚಿವ ರಾಮಲಿಂಗಾ ರೆಡ್ಡಿ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಚಾಮರಾಜನಗರ ಎನ್‌ಕೌಂಟರ್ ಪ್ರಕರಣದಲ್ಲಿ ಮೂವರು ಮೃತಪಟ್ಟಿರುವ ಹಿನ್ನೆಲೆಯಲ್ಲಿ, ಈ ಘಟನೆಗೆ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಬಿಜೆಪಿ ನಾಯಕರು ನಿಜವಾಗಿಯೂ ಭಾವಿಸಿದರೆ ತಾವು ರಾಜೀನಾಮೆ ನೀಡಲು ಸಿದ್ಧ ಎಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಪ್ರಕರಣದ ಕುರಿತು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ನ್ಯಾಯಾಂಗ ತನಿಖೆ ನಡೆಸಬೇಕು, ಮೃತರ ಕುಟುಂಬಗಳಿಗೆ ತಲಾ ರೂ.1 ಕೋಟಿ ಪರಿಹಾರ ನೀಡಬೇಕು ಹಾಗೂ ರಾಮಲಿಂಗಾರೆಡ್ಡಿ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.ಇದಕ್ಕೆ ಪ್ರತಿಕ್ರಿಯಿಸಿದ ರಾಮಲಿಂಗಾರೆಡ್ಡಿ ಅವರು, ಮೃತಪಟ್ಟವರು ರೈತರಲ್ಲ, ಬೇಟೆಗಾರರು ಎಂದು ತನಿಖೆಯಲ್ಲಿ ದೃಢಪಟ್ಟರೆ ಪರಿಹಾರ ನೀಡುವ ಪ್ರಶ್ನೆಯೇ ಇಲ್ಲ


ಉದಯವಾಹಿನಿ ಚಿತ್ರ

ಎಂದು ಹೇಳಿದರು. ಸದ್ಯ ಪ್ರಕರಣದ ಕುರಿತು ಮ್ಯಾಜಿಸ್ಟೀರಿಯಲ್ ತನಿಖೆ ನಡೆಯುತ್ತಿದೆ. ಇನ್ನೂ ಮೂರು ದಿನಗಳಲ್ಲಿ ವರದಿ ಬರುವ ನಿರೀಕ್ಷೆಯಿದೆ. ಈ ಅಧಿವೇಶನ ಇನ್ನೂ ಎರಡು ವಾರಗಳ ಕಾಲ ನಡೆಯಲಿದೆ. ವರದಿಯನ್ನು ಸದನದಲ್ಲಿ ಮಂಡಿಸುತ್ತೇವೆ. ಅದರಿಂದ

> ಅರಣ್ಯ ಸಿಬ್ಬಂದಿ ತಮ್ಮನ್ನು ಶಂಕಿತರು ದಾಳಿ ಮಾಡಲು ಮುಂದಾದ ಹಿನ್ನೆಲೆಯಲ್ಲಿ ಆತ್ಮರಕ್ಷಣೆಗಾಗಿ ಗುಂಡು ಹಾರಿಸಿದ್ದಾರೆ . ಸಚಿವ ರಾಮಲಿಂಗಾ ರೆಡ್ಡಿ

ತೃಪ್ತಿಯಾಗದಿದ್ದರೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುತ್ತೇವೆ'' ಎಂದು ತಿಳಿಸಿದರು. ಅರಣ್ಯ ಇಲಾಖೆ ಅಧಿಕಾರಿಗಳು ತಪ್ಪು ಮಾಡಿದ್ದಾರೆ ಎಂಬುದು ತನಿಖೆಯಲ್ಲಿ ಕಂಡುಬಂದರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಬಳಿಕ ಸದನದಲ್ಲಿ ಪ್ರಕರಣದ ವಿವರ ನೀಡಿದ ರಾಮಲಿಂಗಾರೆಡ್ಡಿ, ಆಗಸ್ಟ್ 14ರಂದು ರಾತ್ರಿ 8 ಗಂಟೆಗೆ ಅರಣ್ಯ ಇಲಾಖೆಗೆ ಅಕ್ರಮ ಬೇಟೆಯ ಕುರಿತು ಮಾಹಿತಿ ಬಂದಿತ್ತು. ಶಂಕಿತರನ್ನು ಪತ್ತೆಹಚ್ಚಲು ಎರಡು ತಂಡಗಳನ್ನು ಅರಣ್ಯಕ್ಕೆ ಕಳುಹಿಸಲಾಗಿತ್ತು. ಬೆಳಗಿನ ಜಾವ 5 ಗಂಟೆ ಸುಮಾರಿಗೆ ಅರಣ್ಯ ಸಿಬ್ಬಂದಿಗೆ ಶಂಕಿತ ಬೇಟೆಗಾರರು ಕಾಣಿಸಿಕೊಂಡಿದ್ದರು.

# ಸ್ಥಾನಗಳು ಬದಲಾಗುತ್ತವೆ, ಆದರೆ..; ಹುದ್ದೆಯಿಂದ ಕೆಳಗಿಳಿದ ಸಂಸದ ಹೇಳಿದ್ದೇನು?

• ಉದಯವಾಹಿನಿ, ಬೆಂಗಳೂರು

ಬಿಜೆಪಿ ರಾಷ್ಟ್ರೀಯ ಸಂಘಟನೆಯಲ್ಲಿ ಮಹತ್ವದ ಬದಲಾವಣೆಯಾಗಿದೆ. ಪಕ್ಷದ ಹೊಸ ಪದಾಧಿಕಾರಿಗಳ ನೇಮಕ ಮಾಡಲಾಗಿದ್ದು, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಅವರನ್ನು ಹುದ್ದೆಯಿಂದ ಕೆಳಗಿಳಿಸಲಾಗಿದೆ. ಈ ಸಂಬಂಧ ತೇಜಸ್ವಿ ಸೂರ್ಯ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ, ಯುವ ಘಟಕದೊಂದಿಗಿನ ತಮ್ಮ 14 ವರ್ಷಗಳ ಪ್ರಯಾಣವನ್ನು ನೆನಪಿಸಿಕೊಂಡಿದ್ದಾರೆ. ನಾಯಕತ್ವವನ್ನು ವಹಿಸಿಕೊಂಡ ಹೇಮಾಂಗ್ ಜೋಶಿ ಅವರನ್ನು ಅಭಿನಂದಿಸಿದ್ದಾರೆ. ನಗರ ಘಟಕದಲ್ಲಿ ತಳಮಟ್ಟದ ಕಾರ್ಯಕರ್ತನಾಗಿ ತನ್ನ ಬಿಜೆವೈಎಂ ಪ್ರಯಾಣವನ್ನು ಪ್ರಾರಂಭಿಸಿದ್ದನ್ನು ಸ್ಮರಿಸಿದ್ದಾರೆ, ಸ್ಥಾನಕ್ಕೆ ಕೊಂಡೊಯ್ಯುತ್ತದೆ ಎಂದು ನಾನು ಎಂದಿಗೂ ಊಹಿಸಿರಲಿಲ್ಲ ಎಂದು ಹೇಳಿದ್ದಾರೆ.

# ನಮ್ಮ ರಾಜ್ಯದ ಆಡಳಿತದಲ್ಲಿ ಮೂಗು ತೂರಿಸಬೇಡಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಹನೂರು ವನ್ಯಜೀವಿ ವಲಯದಲ್ಲಿ ಮೂವರು ಶಂಕಿತ ಬೇಟೆಗಾರರ ಹತ್ಯೆಗೆ ಸಂಬಂಧಿಸಿದಂತೆ ತಮಿಳುನಾಡು ರಾಜಕಾರಣಿಗಳು ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡಬಾರದು. ಕರ್ನಾಟಕವು ತನ್ನ ಪ್ರದೇಶದ ಪಾವಿತ್ರ್ಯವನ್ನು ರಕ್ಷಿಸುತ್ತದೆ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮಂಗಳವಾರ ಎಚ್ಚರಿಕೆ ನೀಡಿದ್ದಾರೆ.

ಆ.15ರಂದು ಚಾಮರಾಜನಗರದಲ್ಲಿ ತಮಿಳರು ಎಂದು ಹೇಳಲಾದ ಮೂವರು ವ್ಯಕ್ತಿಗಳ ಸಾವಿನ ಬಗ್ಗೆ ಸಿಬಿಐ ತನಿಖೆ ನಡೆಸಬೇಕೆಂಬ ತಮಿಳುನಾಡಿನ ರಾಜಕಾರಣಿಗಳ ಬೇಡಿಕೆಯನ್ನು ಅವರು ತಳ್ಳಿಹಾಕಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡು ತನ್ನದೇ ಆದ ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳನ್ನು ತಾವೇ ನಿರ್ವಹಿಸಿಕೊಳ್ಳಬೇಕು. ಇದು ಒಕ್ಕೂಟ ರಚನೆ. ಯಾವುದೇ ರಾಜ್ಯವು ಬೇರೆ ಯಾವುದೇ ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡಬಾರದು. ಜನರು ಮೂಲಭೂತ ತಿಳುವಳಿಕೆಯನ್ನು ಹೊಂದಿರಬೇಕು. ತಮಿಳುನಾಡಿನ ಯಾವುದೇ ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳಲ್ಲಿ ನಾನು ಭಾಗಿಯಾಗಲು ಸಾಧ್ಯವಿಲ್ಲ. ಪ್ರತಿಯೊಂದು ರಾಜ್ಯಕ್ಕೂ ತನ್ನದೇ ಆದ ಸಮಸ್ಯೆಗಳಿವೆ . ಪಕ್ಷವನ್ನು ಮೀರಿ ಒತ್ತಾಯಿಸಿದ ವಿಷಯ ತಮಿಳುನಾಡು ವಿಧಾನಸಭೆಯಲ್ಲಿ ಪ್ರತಿಧ್ವನಿಸಿದ ಬೆನ್ನಲ್ಲೇ ಅವರ ಹೇಳಿಕೆಗಳು ಬಂದಿವೆ.

# ಭಯ ಆಗುತ್ತಿದೆ, ನನಗೂ ಸೋಂಕು ಹರಡಬಹುದು'; ಜೈಲಿನಲ್ಲಿ ಮಾಜಿ ಸಂಸದನ ರಂಪಾಟ!



ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆ.ಆರ್.ಪುರ,

ಮನೆಗೆಲಸದ ಮಹಿಳೆ ಮೇಲೆ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಬಳಿ ಮೊಬೈಲ್ ಪತ್ತೆಯಾದ ಬೆನ್ನಲ್ಲೇ, ಡಿಜಿಪಿ ಸೂಚನೆ ಮೇರೆಗೆ ಅವರನ್ನು ಬೇರೆ ಬ್ಯಾರಕ್‌ಗೆ ಶಿಫ್ಟ್ ಮಾಡಲಾಗಿದ್ದು, 25 ಜನರಿರುವ ಸೆಲ್‌ಗೆ ಶಿಫ್ಟ್ ಮಾಡಲಾಗಿದೆ. ಇದುವೇ ಪ್ರಜ್ವಲ್ ರೇವಣ್ಣ ಅವರಿಗೆ ಸಂಕಷ್ಟಕ್ಕೆ ಸಿಲುಕಿಸಿದೆ ಎನ್ನಲಾಗಿದೆ.

ಪ್ರಜ್ವಲ್ ರೇವಣ್ಣ ಅವರನ್ನು ಶಿಫ್ಟ್ ಮಾಡಿರುವ ಹೊಸ ಬ್ಯಾರಕ್‌ನಲ್ಲಿ ಕೆಮ್ಮು, ಕಜ್ಜಿ ಕಾಯಿಲೆ ಇರುವ ಜನರಿದ್ದು, ಇಲ್ಲಿ ಇರಲು ನನಗೆ ಸಾಧ್ಯವಾಗುತ್ತಿಲ್ಲ ಎಂದು ಅವರು ಅಳಲು ತೋಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ನನ್ನ ಬ್ಯಾರಕ್‌ನಲ್ಲಿರುವ ಕೆಲವರಿಗೆ ಕಜ್ಜಿ, ಕೆಮ್ಮು ಇರುವವರು ಇರುವುದರಿಂದ ನನಗೂ ಸೋಂಕು ಹರಡುವ ಭಯವಿದೆ. ಹೀಗಾಗಿ, ನನ್ನನ್ನು ಬೇರೆ ಸೆಲ್‌ಗೆ ವರ್ಗಾಯಿಸಿ ಎಂದು ಪ್ರಜ್ವಲ್ ಪರಪ್ಪನ ಅಗ್ರಹಾರ ಜೈಲಿನ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ ಎನ್ನಲಾಗಿದೆ. ಒಂದೇ ಸೆಲ್‌ನಲ್ಲಿ 25 ಮಂದಿ ಕೈದಿಗಳಿದ್ದು, ಎಲ್ಲರೂ ಇದೀಗ ಒಂದೇ ಶೌಚಾಲಯ ಬಳಸಬೇಕಿದೆ. ಇತ್ತೀಚೆಗಷ್ಟೇ ಕೇಂದ್ರ ಅಪರಾಧ ವಿಭಾಗದ(ಸಿಸಿಬಿ) ಪೊಲೀಸ್ ತಂಡ ಪರಪ್ಪನ ಅಗ್ರಹಾರ ಜೈಲಿನ ಮೇಲೆ ಹಠಾತ್ ದಾಳಿ ನಡೆಸಿದ ವೇಳೆ ಪ್ರಜ್ವಲ್ ರೇವಣ್ಣ ಮತ್ತು ಇನ್ನೊಬ್ಬ ವಿಚಾರಣಾಧೀನ ಕೈದಿ ಬಳಿ ಮೊಬೈಲ್ ಫೋನ್ ಪೆನ್ ಡ್ರೈವ್ ಪತ್ತೆಯಾಗಿತ್ತು. ಇದು ಕಾರಾಗೃಹ ಮತ್ತು ಸುಧಾರಣಾ ಇಲಾಖೆಗೆ ಭಾರಿ ಮುಜುಗರ ಉಂಟು ಮಾಡಿತ್ತು. ಬಳಿಕ ವಿಶೇಷ ಭದ್ರತಾ ವಿಭಾಗದ ಬ್ಯಾರಕ್‌ನಿಂದ ಪ್ರಜ್ವಲ್ ಅವರನ್ನು ಸಾಮಾನ್ಯ ಕೈದಿಗಳ ಬ್ಯಾ ರಕ್‌ಗೆ ಸ್ಥಳಾಂತರಿಸಿದ್ದರು.

# ಶಿವಶಂಕರಪ್ಪ ಸಾಹುಕಾರ್‌ಗೆ ED ಶಾಕ್

• ಉದಯವಾಹಿನಿ, ಬೆಂಗಳೂರು

ಪಶುವೈದ್ಯಾಧಿಕಾರಿಗಳ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್ ಸಿ) ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರ ಮನೆ ಹಾಗೂ ಕಚೇರಿ ಸೇರಿದಂತೆ 21ಕ್ಕೂ ಹೆಚ್ಚು ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಮಂಗಳವಾರ ದಾಳಿ ನಡೆಸಿದ್ದಾರೆ. ಪಶುವೈದ್ಯಾಧಿಕಾರಿ ನೇಮಕಾತಿಯಲ್ಲಿ ಕೋಟ್ಯಂತರ ಅವ್ಯವಹಾರ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಇಡಿ ಅಧಿಕಾರಿಗಳು ಇಂದು ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ಅವರ ಮನೆ ಮತ್ತು ಕಲಬುರಗಿ ಜಿಲ್ಲೆ ಆಳಂದ ನಿವಾಸದ ಮೇಲೂ ದಾಳಿ ನಡೆಸಿದ್ದಾರೆ.

ಕೆಪಿಎಸ್ ಸಿ ಸದಸ್ಯ ಶಾಂತಾ ಹೊಸಮನಿ ಅವರ ಮನೆ ಮೇಲೂ ರೇಡ್ ನಡೆದಿದ್ದು, ಪಶುವೈದ್ಯಾಧಿಕಾರಿ ಹುದ್ದೆಗೆ ಆಯ್ಕೆಯಾದವರ ಮನೆಗಳು ಸೇರಿದಂತೆ ರಾಜ್ಯದ 8 ಜಿಲ್ಲೆಗಳಲ್ಲಿ ಇಡಿ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ.
ಪಶುವೈದ್ಯಾಧಿಕಾರಿ ನೇಮಕಾತಿಯಲ್ಲಿ ಅಕ್ರಮ ನಡೆದಿದ್ದು, ಅಭ್ಯರ್ಥಿಗಳಿಂದ 70-80 ಲಕ್ಷ ಲಂಚ ಪಡೆದಿರೋ ಆರೋಪ ಕೇಳಿಬಂದಿತ್ತು. ಮಧ್ಯವರ್ತಿಗಳ ಲಂಚದ ಬೇಡಿಕೆ ಕುರಿತು 4 ಎಫ್‌ಐಆರ್ ದಾಖಲಾಗಿದೆ. ಲಂಚದ ಬೇಡಿಕೆಯ ಆಡಿಯೋ ಸಾಕ್ಷ್ಯ ಇಡಿಗೂ ಸಲ್ಲಿಕೆಯಾಗಿತ್ತು.

# ರಾಜ್ಯದಲ್ಲಿ ಆತಂಕ ಮೂಡಿಸಿದ ವನ್ಯಜೀವಿ ಬೇಟೆ: ಕೇವಲ 30 ದಿನಗಳಲ್ಲಿ 5 ಪ್ರಮುಖ ಪ್ರಕರಣ ದಾಖಲು..!

• ಉದಯವಾಹಿನಿ, ಬೆಂಗಳೂರು

ರಾಜ್ಯದ ಅರಣ್ಯ ಪ್ರದೇಶಗಳಲ್ಲಿ ಕಳೆದ ಒಂದು ತಿಂಗಳಿನಿಂದ ಕಾಡುಪ್ರಾಣಿಗಳ ಅಕ್ರಮ ಬೇಟೆ ಗಣನೀಯವಾಗಿ ಹೆಚ್ಚಾಗಿದ್ದು, ವನ್ಯಜೀವಿ ಪ್ರೇಮಿಗಳಲ್ಲಿ ತೀವ್ರ ಕಳವಳ ಮೂಡಿಸಿದೆ. ಕೇವಲ 30 ದಿನಗಳ ಅವಧಿಯಲ್ಲಿ ರಾಜ್ಯದ ವಿವಿಧೆಡೆ ಐದು ಪ್ರಮುಖ ಬೇಟೆ ಪ್ರಕರಣಗಳು ಬೆಳಕಿಗೆ ಬಂದಿದ್ದು, ಈ ಪೈಕಿ ಕಾವೇರಿ ವನ್ಯಜೀವಿ ಧಾಮದಲ್ಲಿ ನಡೆದ ಎನ್‌ಕೌಂಟರ್ ತೀವ್ರ ರಾಜಕೀಯ ಹಾಗೂ ಸಾಮಾಜಿಕ ವಿವಾದಕ್ಕೆ ಕಾರಣವಾಗಿದೆ.ಕಾಡುಪ್ರಾಣಿಗಳ ಮಾಂಸಕ್ಕೆ ಮಾರುಕಟ್ಟೆಯಲ್ಲಿ ಹೆಚ್ಚುತ್ತಿರುವ ಬೇಡಿಕೆಯೇ ಈ ಅಕ್ರಮ ದಂಧೆಗೆ ಮುಖ್ಯ ಕಾರಣ ಎಂದು ಹೇಳಲಾಗಿದೆ.

ಕರ್ನಾಟಕದಲ್ಲಿ ಕಳೆದ 30 ದಿನಗಳಲ್ಲಿ ಐದು ವನ್ಯಜೀವಿ ಬೇಟೆ ಪ್ರಕರಣಗಳು ವರದಿಯಾಗಿದ್ದು, ಒಟ್ಟು ಎಂಟು ಮಂದಿಯನ್ನು ಬಂಧಿಸಲಾಗಿದೆ.

# ಪೊಲೀಸ್ ಠಾಣೆಗೆ ತೆರಳದೇ FIR ದಾಖಲು: ಏಜೆಂಟಿಕ್ ಎಐ ಬಳಕೆಗೆ ಸರ್ಕಾರ ಚಿಂತನೆ

## ಹಿಟ್ ಆಂಡ್ ರನ್ ಪ್ರಕರಣ ಅಥವಾ ಕಳ್ಳತನ ನಡೆದಾಗ, ನಾಗರಿಕರು ಏಜೆಂಟಿಕ್ ಎಐ ಬಳಸಿ ಜೀರೋ ಎಫ್‌ಐಆರ್ ಅಥವಾ ಇ-ಎಫ್‌ಐಆರ್ ದಾಖಲಿಸಬಹುದು

• ಉದಯವಾಹಿನಿ, ಬೆಂಗಳೂರು

1 ಸುಳ್ಳು ದೂರುಗಳು ದಾಖಲಾಗುವ
2 ಸುಧಾರಣೆಗಾಗಿ ಮೂರು ಸಮಿತಿಗಳು
3 ನಾಗರಿಕರ ಅಹವಾಲು ನಿರ್ವಹಣಾ

ತೊಂದರೆಗೆ ಸಿಲುಕಿರುವ ನಾಗರಿಕರು ಪೊಲೀಸ್ ಠಾಣೆಗೆ ತೆರಳುವ ಅಗತ್ಯವಿಲ್ಲದೆ ತ್ವರಿತವಾಗಿ ಮೊದಲ ಮಾಹಿತಿ ವರದಿ ದಾಖಲಿಸಲು ಸಹಾಯ ಮಾಡುವ ಏಜೆಂಟಿಕ್ ಕೃತಕ ಬುದ್ಧಿಮತ್ತೆ ವ್ಯವಸ್ಥೆಯನ್ನು ಅಳವಡಿಸುವ ಕುರಿತು ಸರ್ಕಾರ ಪರಿಶೀಲಿಸುತ್ತಿದೆ.

ಪೊಲೀಸಿಂಗ್‌ನಲ್ಲಿ ಎಐ ಬಳಕೆಯಾಗಬಹುದಾದ ಹಲವು ಮಾರ್ಗಗಳಲ್ಲಿ ಇದು ಒಂದು ಉದಾಹರಣೆಯಾಗಬಹುದು. ಗೃಹ, ಐಟಿ ಮತ್ತು ಇ-ಆಡಳಿತ ಇಲಾಖೆ ಈಗಾಗಲೇ ಆಂಥ್ರೋಪಿಕ್ ಮತ್ತು ಸರ್ವಂ ಸೇರಿದಂತೆ ತಂತ್ರಜ್ಞಾನ ಕಂಪನಿಗಳೊಂದಿಗೆ ಈ ಕುರಿತು ಮಾತುಕತೆ ನಡೆಸುತ್ತಿದೆ. ನಾಗರಿಕರಿಗೆ ತಕ್ಷಣ ಏನು ಮಾಡಬೇಕು ಎಂಬುದು ತಿಳಿಯದಂತಹ ಸಂದರ್ಭಗಳಲ್ಲಿ ಅವರು ಬಳಸಬಹುದಾದ ಏಜೆಂಟಿಕ್ ಎಐ ವ್ಯವಸ್ಥೆಯನ್ನು ನಾವು ಪರಿಶೀಲಿಸುತ್ತಿದ್ದೇವೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. ಹಿಟ್ ಆಂಡ್ ರನ್ ಪ್ರಕರಣ ಅಥವಾ ಕಳ್ಳತನ ನಡೆದಾಗ, ನಾಗರಿಕರು ಏಜೆಂಟಿಕ್ ಎಐ ಬಳಸಿ ಜೀರೋ ಎಫ್‌ಐಆರ್ ಅಥವಾ ಇ-ಎಫ್‌ಐಆರ್ ದಾಖಲಿಸಬಹುದು. ಬಳಿಕ ಹೆಚ್ಚಿನ ಪ್ರಕ್ರಿಯೆಗಳಿಗಾಗಿ ದೂರುದಾರರಿಗೆ 24ರಿಂದ 48 ಗಂಟೆಗಳ ಒಳಗಾಗಿ ಪೊಲೀಸ್ ಠಾಣೆಗೆ ಭೇಟಿ ನೀಡುವ ಅವಕಾಶ ಇರುತ್ತದೆ ಎಂದು ಅವರು ಹೇಳಿದರು.


ಪ್ರಸ್ತಾವಿತ ಸೌಲಭ್ಯವನ್ನು ಬಳಸಲು ನಾಗರಿಕರಿಗೆ ಯಾವ ರೀತಿಯ ತಂತ್ರಜ್ಞಾನ ಒದಗಿಸಬೇಕು ಎಂಬುದನ್ನು ಸರ್ಕಾರ ಇನ್ನೂ ಅಂತಿಮಗೊಳಿಸುತ್ತಿದೆ. ಸುಳ್ಳು ದೂರುಗಳು ದಾಖಲಾಗುವ ಸಾಧ್ಯತೆಯನ್ನೂ ಸರ್ಕಾರ ಪರಿಗಣಿಸುತ್ತಿದೆ. ಈ ಯೋಜನೆ ಇನ್ನೂ ಚರ್ಚಾ ಹಂತದಲ್ಲಿದೆ ಎಂದು ಅವರು ತಿಳಿಸಿದರು. ಈ



ಉದಯವಾಹಿನಿ ಚಿತ್ರ

ಸುಧಾರಣೆಯನ್ನು ಅಂತಿಮಗೊಳಿಸಿದ ಬಳಿಕ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸರ್ಕಾರದ ನಾಗರಿಕರ ಅಹವಾಲು ನಿರ್ವಹಣಾ ವ್ಯವಸ್ಥೆಯನ್ನು ಸಂಪೂರ್ಣವಾಗಿ ಬದಲಿಸುವ ಹಾಗೂ ಸರ್ಕಾರಿ ಪ್ರಕ್ರಿಯೆಗಳನ್ನು ಮರು ವಿನ್ಯಾಸಗೊಳಿಸುವ ಉದ್ದೇಶದಿಂದ ರಚಿಸಿರುವ ಹೊಸ 'ಪ್ರಜಾಸೇವಾ' ಇಲಾಖೆಯ ವ್ಯಾಪ್ತಿಗೆ ಇದು ಬರುವ ಸಾಧ್ಯತೆ ಇದೆ.

ಪೊಲೀಸ್ ಠಾಣೆಗೆ ಭೇಟಿ ನೀಡದೆ ನಾಗರಿಕರಿಗೆ ಎಫ್‌ಐಆರ್ ದಾಖಲಿಸುವ ಅವಕಾಶ ಕಲ್ಪಿಸುವ ಸರ್ಕಾರದ ಇದು ಎರಡನೇ ಪ್ರಯತ್ನವಾಗಿದೆ.
2014ರಲ್ಲಿ ಬೆಂಗಳೂರಿನ ಮಲ್ಲೇಶ್ವರಂನ ಮಂತ್ರಿ ಮಾಲ್‌ನಲ್ಲಿ ಪೊಲೀಸರು ಭಾರತದ ಮೊದಲ ರಿಮೋಟ್ ಎಫ್



ಐಆರ್ ಕೇಂದ್ರ ಎಂದು ಹೇಳಲಾಗಿದ್ದ ವ್ಯವಸ್ಥೆಯನ್ನು ಆರಂಭಿಸಿದ್ದರು. ಇದಕ್ಕೆ ತಂತ್ರಜ್ಞಾನ ಸಹಾಯ ಒದಗಿಸಿತ್ತು.

ಆದರೆ 2016ರ ಜನವರಿಯ ವೇಳೆಗೆ ಆಡಳಿತಾತ್ಮಕ ಸಮಸ್ಯೆಗಳ ಕಾರಣ ಈ ಯೋಜನೆಯನ್ನು ಸ್ಥಗಿತಗೊಳಿಸಲಾಯಿತು.ಸೈಬರ್ ಅಪರಾಧಗಳ ಹೆಚ್ಚಳ ಹಾಗೂ ಫೋರೆನ್ಸಿಕ್ ಕ್ಷೇತ್ರದಲ್ಲಿನ ಪ್ರಗತಿಯಿಂದ ಪೊಲೀಸರ ಕೆಲಸದ ಸ್ವರೂಪ ಬದಲಾಗಿರುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಗೆ ಹೊಸ ಕ್ಯಾಡರ್ ಮತ್ತು ನೇಮಕಾತಿ ನಿಯಮಗಳ ಅಗತ್ಯವಿದೆ ಎಂದು ಸರ್ಕಾರ ಭಾವಿಸಿದೆ. ಇದರ ಜೊತೆಗೆ ನೇಮಕಾತಿ ವೇಳಾಪಟ್ಟಿಯನ್ನೂ ಸಿದ್ಧಪಡಿಸುವ ಯೋಜನೆ ರೂಪಿಸಲಾಗುತ್ತಿದೆ.



> ಎಟಿಎಂ ಮಾದರಿಯ ಕಿಯೋಸ್ಕ್‌ಗೆ ನಾಗರಿಕರು ತೆರಳಿ, ವಿಡಿಯೋ ಮೂಲಕ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸೆಂಟರ್‌ನಲ್ಲಿದ್ದ ಪೊಲೀಸ್ ಅಧಿಕಾರಿಯೊಂದಿಗೆ ಮಾತನಾಡಿ ದೂರು ನೀಡಬಹುದಾಗಿತ್ತು. ಬಳಿಕ ಡಿಜಿಟಲ್ ಸಹಿ ಹೊಂದಿದ ಎಫ್‌ಐಆರ್ ನ್ನು ಪಡೆಯಬಹುದಾಗಿತ್ತು.-ಪ್ರಿಯಾಂಕ್ ಖರ್ಗೆ

### ನೇಮಕಾತಿ ನಿಯಮಗಳ ಮರುಪರಿಶೀಲನೆ

ಪೊಲೀಸ್ ಸುಧಾರಣೆ, ಆಧುನೀಕರಣದ ಪರಿಶೀಲನೆ ಹಾಗೂ ಕ್ಯಾಡರ್ ಮತ್ತು ನೇಮಕಾತಿ ನಿಯಮಗಳ ಮರುಪರಿಶೀಲನೆಗಾಗಿ ಪ್ರಿಯಾಂಕ್ ಖರ್ಗೆ ಮೂರು ಸಮಿತಿಗಳನ್ನು ರಚಿಸಲಿದ್ದಾರೆ.ಈ ಸಮಿತಿಗಳ ನೇತೃತ್ವವನ್ನು ನಿವೃತ್ತ ಐಪಿಎಸ್ ಅಧಿಕಾರಿಯೊಬ್ಬರು ವಹಿಸಲಿದ್ದಾರೆ ಎಂದು ಅವರು ಹೇಳಿದರು.

# ಕ್ರೀಡೆಯಿಂದ ಮಾನಸಿಕ, ದೈಹಿಕ ಆರೋಗ್ಯ ವೃದ್ಧಿ

• ಉದಯವಾಹಿನಿ, ಕೆ.ಆರ್.ಪುರ,

ಕ್ರೀಡೆಯಿಂದ ಮಾನಸಿಕ ಹಾಗೂ ದೈಹಿಕ ಆರೋಗ್ಯ ವೃದ್ಧಿಯಾಗಲ್ಲಿದೆ ಎಂದು ಮಹದೇವಪುರ ದಲಿತ ಸಂಘದ ಪ್ರಧಾನ ಕಾರ್ಯದರ್ಶಿ ಹಾಗೂ ವಕೀಲರಾದ ವಿಕ್ರಮ ಅವರು ತಿಳಿಸಿದರು.

ಮಹದೇವಪುರ ಕ್ಷೇತ್ರದ ದೊಡ್ಡಕನ್ನೆಲ್ಲಿಯ ವೇವಮರೆಡ್ಡಿ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ ಇಂಡಿಪೆಂಡೆಂಟ್ ಪ್ರಿಮಿಯಾರ್ ಲೀಗ್ -2026 ವಿಜೇತರಿಗೆ ಬಹುಮಾನ ವಿತರಣೆ ಮಾಡಿ ಮತನಾಡಿದ ಅವರು.ಹಿಂದಿನ ಯುವಕರು ದಾರಿತಪ್ಪುವಂತಹ ಚಟುವಟಿಕೆಗಳಲ್ಲಿ ಭಾಗಿಯಾಗುವುದನ್ನು ನಿಲ್ಲಿಸಬೇಕಿದೆ. ಅವರಿಗೆ ಸರಿಯಾದ ಮಾರ್ಗದರ್ಶನ ಹಾಗೂ ಆರೋಗ್ಯಕರವಾದ ಚಟುವಟಿಕೆಗಳನ್ನು ಮೈಗೂಡಿಸಿಕೊಳ್ಳವಂತಹ ಕ್ರೀಡೆಗಳಿಗೆ ಉತ್ತೇಜನ ನೀಡುವ ಪ್ರಯತ್ನ ಮಾಡಲಾಗಿದೆ ಎಂದರು. ವಿಜೇತರಾಗಿ ಸುಭಾಷ್ ಚಂದ್ರ ಬೋಸ್ ತಂಡ ಹಾಗೂ ರನ್ನರ್ ಆಫ್ ಸಂಗೊಳ್ಳಿ ರಾಯಣ್ಣ ತಂಡ ಪಡೆದುಕೊಂಡಿತು, ಇದೇವೇಳೆ ಕಾವೇರಿ ಆಸ್ಪತ್ರೆ


ಉದಯವಾಹಿನಿ ಚಿತ್ರ

ಸಹಯೋಗದಲ್ಲಿ ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿತ್ತು. ಸ್ಥಳೀಯ ಮುಖಂಡರು ಗ್ರಾಮಸ್ಥರಾದ ಮಂಜುನಾಥ ರೆಡ್ಡಿ, ವೇಣುಗೋಪಾಲ ರೆಡ್ಡಿ, ಮುನಿರೆಡ್ಡಿ, ಕೃಷ್ಣಮೂರ್ತಿ, ಸುರೇಶ್, ಮುನಿರಾಜು, ರವಿ, ರಂಜಿತ್, ನವೀನ್, ಆಂಜಿ, ಮಿಥುನ್, ಚಂದ್ರು, ಅರ್ಜುನ್, ಕಮಲ್, ಗಣೇಶ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ವರ್ತೂರು ಮುಖ್ಯರಸ್ತೆ ಅಗಲೀಕರಣ ವಿಳಂಬಕ್ಕೆ ಆಕ್ರೋಶ

• ಉದಯವಾಹಿನಿ, ಕೆ.ಆರ್.ಪುರ,

ಮಹದೇವಪುರ ಕ್ಷೇತ್ರದ ವರ್ತೂರು ಮುಖ್ಯರಸ್ತೆ ಅಗಲೀಕರಣ ಕಾಮಗಾರಿಯನ್ನು ತಕ್ಷಣವೇ ಚುರುಕುಗೊಳಿಸಿ, ಗುಣಮಟ್ಟದೊಂದಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗದಂತೆ ಪೂರ್ಣಗೊಳಿಸಬೇಕು. ಇಲ್ಲದಿದ್ದರೆ ಮುಂಬರುವ ದಿನಗಳಲ್ಲಿ ಬೃಹತ್ ಹೋರಾಟ ಕೈಗೆತ್ತಿಕೊಳ್ಳಲಾಗುವುದು ಎಂದು ಸ್ಥಳೀಯ ಮುಖಂಡ ಕುಪ್ಪಿ ಮಂಜುನಾಥ್ ಅವರು ಎಚ್ಚರಿಸಿದ್ದಾರೆ.

ವರ್ತೂರು ಗಾಂಧಿ ವೃತ್ತದಲ್ಲಿ ವರ್ತೂರು ಮುಖ್ಯರಸ್ತೆ ಹೋರಾಟ ಸಮಿತಿ ಹಾಗೂ ಸ್ಥಳೀಯ ನಾಗರಿಕರ ನೇತೃತ್ವದಲ್ಲಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ರಸ್ತೆ ಅಗಲೀಕರಣ ಕಾಮಗಾರಿ ಅತ್ಯಂತ ಮಂದಗತಿಯಲ್ಲಿ ಸಾಗುತ್ತಿದ್ದು, ಕೆ.ಆರ್.ಡಿ.ಸಿ.ಎಲ್ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ನಿರ್ಲಕ್ಷ್ಯವೇ ಇದಕ್ಕೆ ಕಾರಣ. ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಾಮಗಾರಿಗೆ ವೇಗ ನೀಡಬೇಕು. ಇಲ್ಲವಾದಲ್ಲಿ ಗ್ರಾಮಸ್ಥರೊಂದಿಗೆ


ಉದಯವಾಹಿನಿ ಚಿತ್ರ

ಸೇರಿ ಉಗ್ರ ಸ್ವರೂಪದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಅವರು ತಿಳಿಸಿದರು.

ರಸ್ತೆ ಅಗಲೀಕರಣ ನಡೆಯುತ್ತಿರುವ ಸ್ಥಳಗಳಲ್ಲಿ ಸುರಕ್ಷತಾ ಕ್ರಮಗಳ ಕೊರತೆಯಿಂದ ಸಾರ್ವಜನಿಕರ ಜೀವಕ್ಕೆ ಅಪಾಯ ಉಂಟಾಗುತ್ತಿದೆ ಎಂದು ಸಭೆಯಲ್ಲಿ ಆತಂಕ ವ್ಯಕ್ತಪಡಿಸಲಾಯಿತು. ಕಾಮಗಾರಿ ನಡೆಯುವ ಸ್ಥಳಗಳಲ್ಲಿ ಸಮರ್ಪಕ ಬ್ಯಾರಿಕೇಡ್‌ಗಳು ಹಾಗೂ ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ರಸ್ತೆಯುದ್ದಕ್ಕೂ ನಿರಂತರವಾಗಿ ನೀರು ಸಿಂಪಡಿಸಿ ಧೂಳಿನ ಸಮಸ್ಯೆಯನ್ನು ಹದಗೆಡದಂತೆ ನೋಡಿಕೊಳ್ಳಬೇಕು.

# ಎಲೆಕ್ಟ್ರಿಕ್ ವಾಹನ ತಂತ್ರಜ್ಞಾನ ಉತ್ಕೃಷ್ಟತಾ ಕೇಂದ್ರ ಉದ್ಘಾಟನೆ

• ಉದಯವಾಹಿನಿ, ಬೆಂಗಳೂರು

ಸರ್ ಎಂ. ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯ ವಿದ್ಯುತ್ ಮತ್ತು ವಿದ್ಯುನ್ಮಾನ ಇಂಜಿನಿಯರಿಂಗ್ ವಿಭಾಗದಲ್ಲಿ ಎಲೆಕ್ಟ್ರಿಕ್ ವಾಹನ ತಂತ್ರಜ್ಞಾನ ಉತ್ಕೃಷ್ಟತಾ ಕೇಂದ್ರ ಗಣ್ಯರ ಸಮ್ಮುಖದಲ್ಲಿ ಉದ್ಘಾಟಿಸಲಾಯಿತು.

ಶ್ರೀಕೃಷ್ಣದೇವರಾಯ ಶಿಕ್ಷಣ ದತ್ತಿಯ ಸಂಸ್ಥಾಪಕ ಟ್ರಸ್ಟಿ ಹಾಗೂ ಶೈಕ್ಷಣಿಕ ಸಮಿತಿಯ ಅಧ್ಯಕ್ಷರು ಆದ ಶ್ರೀ ಕೆ.ವಿ ಶೇಖರ್ ರಾಜು ಅವರ ಮಾರ್ಗದರ್ಶನದಲ್ಲಿ ಹಾಗೂ ಪ್ರಾಂಶುಪಾಲರಾದ ಡಾ. ಎಂ. ಎನ್. ತಿಪ್ಪೇಸ್ವಾಮಿ ಅವರ ನೇತೃತ್ವದಲ್ಲಿ ಸ್ಥಾಪಿಸಲಾದ ಈ ಕೇಂದ್ರವು, ಎಲೆಕ್ಟ್ರಿಕ್ ವಾಹನ ಕ್ಷೇತ್ರದಲ್ಲಿ ವಿದ್ಯಾರ್ಥಿಗಳಿಗೆ ಆಧುನಿಕ ತಂತ್ರಜ್ಞಾನ, ಪ್ರಾಯೋಗಿಕ ಅನುಭವ ಹಾಗೂ ಕೈಗಾರಿಕಾ ಕೌಶಲ್ಯಗಳನ್ನು ಒದಗಿಸುವ ಪ್ರಮುಖ ವೇದಿಕೆಯಾಗಲಿದೆ.

ಕಾರ್ಯಕ್ರಮದಲ್ಲಿ ಉಪಪ್ರಾಂಶುಪಾಲರು ಹಾಗೂ ವಿಭಾಗದ ಮುಖ್ಯಸ್ಥರಾದ ಡಾ. ಎಚ್. ಎಲ್. ಸುರೇಶ್ ಉಪಸ್ಥಿತರಿದ್ದರು. ಕೈಗಾರಿಕಾ ಕ್ಷೇತ್ರದ ಪ್ರತಿನಿಧಿಯಾದ ಶ್ರೀ ನವೀನ್ ಸಿ. ಎಸ್. ಅವರು ಭಾಗವಹಿಸಿ, ಎಲೆಕ್ಟ್ರಿಕ್ ವಾಹನ ಕ್ಷೇತ್ರದ ಪ್ರಸ್ತುತ ಬೆಳವಣಿಗೆಗಳು, ಕೈಗಾರಿಕಾ ಅಗತ್ಯಗಳು ಹಾಗೂ ಭವಿಷ್ಯದ ಉದ್ಯೋಗಾವಕಾಶಗಳ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಪ್ರಾಂಶುಪಾಲರಾದ ಡಾ. ಎಂ.ಎನ್ ತಿಪ್ಪೇಸ್ವಾಮಿಯವರು ಮಾತನಾಡಿ ಎಲೆಕ್ಟ್ರಿಕ್ ಮೋಟಾರ್ಗಳು, ಪವರ್ ಎಲೆಕ್ಟ್ರಾನಿಕ್ಸ್, ಇಗಿ ಚಾರ್ಜಿಂಗ್ ತಂತ್ರಜ್ಞಾನ, ನಿಯಂತ್ರಣ ವ್ಯವಸ್ಥೆಗಳು ಹಾಗೂ ಇಗಿ ಡಯಾಗ್ನೋಸ್ಟಿಕ್ಸ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪ್ರಾಯೋಗಿಕ ತರಬೇತಿ ದೊರೆಯಲಿದೆ ಎಂದು ತಿಳಿಸಿದರು. ಶ್ರೀ ಕೃಷ್ಣದೇವರಾಯ ಶಿಕ್ಷಣ ದತ್ತಿಯ ಸಂಸ್ಥಾಪಕ ಟ್ರಸ್ಟಿ ಕೆ.ವಿ ಶೇಖರ್ ರಾಜು ಅವರು ಈ ಕೇಂದ್ರವು ಸಂಶೋಧನೆ, ನವೋದ್ಯಮ, ವಿದ್ಯಾರ್ಥಿ ಯೋಜನೆಗಳು, ಕೌಶಲ್ಯಾಭಿವೃದ್ಧಿ, ಕೈಗಾರಿಕಾ ಸಹಯೋಗ ಮತ್ತು ಉದ್ಯಮಶೀಲತೆಗೆ ಉತ್ತೇಜನ ನೀಡಲಿದೆ.


ಉದಯವಾಹಿನಿ ಚಿತ್ರ

### ಭವಿಷ್ಯದ ಎಲೆಕ್ಟ್ರಿಕ್ ಮೊಬಿಲಿಟಿ ಕ್ಷೇತ್ರಕ್ಕೆ ಅಗತ್ಯ

ಹಸಿರು ತಂತ್ರಜ್ಞಾನ ಮತ್ತು ಸುಸ್ಥಿರ ಸಾರಿಗೆ ವ್ಯವಸ್ಥೆಯ ಅಭಿವೃದ್ಧಿಗೆ ಕೊಡುಗೆ ನೀಡುವುದರೊಂದಿಗೆ, ಭವಿಷ್ಯದ ಎಲೆಕ್ಟ್ರಿಕ್ ಮೊಬಿಲಿಟಿ ಕ್ಷೇತ್ರಕ್ಕೆ ಅಗತ್ಯವಿರುವ ಉದ್ಯೋಗಪರ ಹಾಗೂ ಕೈಗಾರಿಕಾ ಕೌಶಲ್ಯ ಹೊಂದಿದ ತಾಂತ್ರಿಕ ಮಾನವ ಸಂಪನ್ಮೂಲವನ್ನು ರೂಪಿಸುವಲ್ಲಿ ಈ ಕೇಂದ್ರವು ಮಹತ್ವದ ಪಾತ್ರ ವಹಿಸಲಿದೆ ಎಂದು ತಿಳಿಸಿದರು.

# NICE ಯೋಜನೆ ವಶಕ್ಕೆ ಪಡೆಯಲು ಯತ್ನಿಸುತ್ತಿರುವವರು ಯಾರು? HD ಕುಮಾರಸ್ವಾಮಿ ಪ್ರಶ್ನೆ

• ಉದಯವಾಹಿನಿ, ಬೆಂಗಳೂರು

ನೈಸ್ ರಸ್ತೆ ಯೋಜನೆಯನ್ನು ಅಪರಿಚಿತ ವ್ಯಕ್ತಿಗಳು ಅಥವಾ ಸಂಸ್ಥೆಗಳು ವಶಕ್ಕೆ ಪಡೆಯಲು ಯತ್ನಿಸುತ್ತಿವೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ. ಈ ಬೆಳವಣಿಗೆಯ ಹಿಂದೆ ಯಾರಿದ್ದಾರೆ ಎಂಬುದನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರಸ್ವಾಮಿ, ನೈಸ್ ಯೋಜನೆ ಕುರಿತು ಡಿ ಕೆ ಶಿವಕುಮಾರ್ ಇತ್ತೀಚೆಗೆ ನೀಡಿರುವ ಹೇಳಿಕೆಗಳ ಬಗ್ಗೆ ಪ್ರಶ್ನೆಗಳನ್ನು ಎತ್ತಿದರು.

ಈ ಯೋಜನೆಯನ್ನು ರಾಜ್ಯ ಸರ್ಕಾರವೇ ವಶಕ್ಕೆ ಪಡೆಯಲು ಮುಂದಾಗಿದೆಯೇ ಅಥವಾ ಮುಖ್ಯಮಂತ್ರಿಗೆ ಆಪ್ತರಾಗಿರುವ ವ್ಯಕ್ತಿಗಳು ಯೋಜನೆಯನ್ನು ವಶಪಡಿಸಿಕೊಳ್ಳಲು ಯತ್ನಿಸುತ್ತಿದ್ದಾರೆಯೇ ಎಂಬುದನ್ನು ಸರ್ಕಾರ ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

ಮುಖ್ಯಮಂತ್ರಿ ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ ಎಂದು ಕುಮಾರಸ್ವಾಮಿ ಆರೋಪಿಸಿದರು. ಅಧಿಕಾರದ ದುರುಪಯೋಗಕ್ಕೆ ಸಂಬಂಧಿಸಿದ ಯಾವುದೇ ವಿಚಾರದಲ್ಲೂ ತಮ್ಮ ಕುಟುಂಬ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಎಚ್ಚರಿಕೆ


ಉದಯವಾಹಿನಿ ಚಿತ್ರ

ನೀಡಿದರು. ವಿವಾದದ ಕೇಂದ್ರಬಿಂದುವಿನಲ್ಲಿ ರೈತರಿಗೆ ಸೇರಿದ ಅಮೂಲ್ಯ ಭೂಮಿ ಇದೆ ಎಂದು ಆರೋಪಿಸಿದ ಅವರು, ಅದನ್ನು ದುರ್ಬಳಕೆ ಮಾಡಿಕೊಳ್ಳಲು ಸರ್ಕಾರ ಅವಕಾಶ ನೀಡಬಾರದು ಎಂದು ಆಗ್ರಹಿಸಿದರು.

ಮುಖ್ಯಮಂತ್ರಿಗೆ ಇತ್ತೀಚೆಗೆ ಬರೆದಿದ್ದ ಪತ್ರವನ್ನು ಉಲ್ಲೇಖಿಸಿದ ಕುಮಾರಸ್ವಾಮಿ, ಕಾನೂನು ಮತ್ತು ನ್ಯಾಯಾಲಯದ ನಿರ್ದೇಶನಗಳಿಗೆ ಅನುಗುಣವಾಗಿ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ತಾವು ಮನವಿ ಮಾಡಿದ್ದಾಗಿ ಹೇಳಿದರು.

ಎನ್‌ಐಸಿಇ ಯೋಜನೆಯಲ್ಲಿನ ಅಕ್ರಮಗಳ ಬಗ್ಗೆ ಈ ಹಿಂದೆ ನ್ಯಾಯಾಲಯಗಳು ಕಳವಳ ವ್ಯಕ್ತಪಡಿಸಿದ್ದವು. ಅಕ್ರಮ ಟೋಲ್ ಸಂಗ್ರಹದ ಬಗ್ಗೆಯೂ ನ್ಯಾಯಾಲಯಗಳು ಗಮನ ಸೆಳೆದಿದ್ದವು ಎಂದು ಹೇಳಿದರು.

# ವಿಧಾನಸಭೆ ಡೆಪ್ಯೂಟಿ ಸ್ಪೀಕರ್ ಆಗಿ ಮಂಕಾಳ ವೈದ್ಯ, ಪರಿಷತ್ ಉಪಸಭಾಪತಿಯಾಗಿ ಉಮಾಶ್ರೀ !

## ತುಮಕೂರು ಜಿಲ್ಲೆಯ ತಿಪಟೂರು ತಾಲ್ಲೂಕಿನ ನವನಕರ್ ಗ್ರಾಮದವರಾಗಿದ್ದಾರೆ. 1957ರಲ್ಲಿ ಜನಿಸಿದ ಉಮಾಶ್ರೀ ತೀವ್ರ ಬಡತನದ ಹಿನ್ನೆಲೆಯಿಂದ ಬಂದವರು

• ಉದಯವಾಹಿನಿ, ಬೆಂಗಳೂರು

1 ಉಪಸಭಾಪತಿ ಸ್ಥಾನ ಖಾಲಿಯಾಗಿತ್ತು
2 ನಾಮನಿರ್ದೇಶಿತರನ್ನಾಗಿ ಹೆಸರಿಸಿತ್ತು
3 ಸರ್ವಾನುಮತದಿಂದ ಆಯ್ಕೆಯಾದರು

ರಾಜ್ಯ ವಿಧಾನಸಭೆಯ ಡೆಪ್ಯೂಟಿ ಸ್ಪೀಕರ್ ಆಗಿ ಭಟ್ಕಳ ಶಾಸಕ ಮಂಕಾಳ ವೈದ್ಯ ಮತ್ತು ವಿಧಾನಪರಿಷತ್ ಉಪಸಭಾಪತಿಯಾಗಿ ಉಮಾಶ್ರೀ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಿನ್ನೆ ಉಪಸಭಾಧ್ಯಕ್ಷ ಸ್ಥಾನಕ್ಕೆ ಮಂಕಾಳ ವೈದ್ಯ ಮತ್ತು ಉಪಸಭಾಪತಿ ಸ್ಥಾನಕ್ಕೆ ಉಮಾಶ್ರೀ ಮಾತ್ರ ನಾಮಪತ್ರ ಸಲ್ಲಿಸಿದ್ದರು. ಬೇರೆ ಯಾರೊಬ್ಬರು ನಾಮಪತ್ರ ಸಲ್ಲಿಸದ ಕಾರಣ ಇಬ್ಬರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಇಂದು ಬೆಳಗ್ಗೆ ವಿಧಾನಸಭೆಯಲ್ಲಿ ಉಪಸಭಾಧ್ಯಕ್ಷ ಸ್ಥಾನಕ್ಕೆ ಶಾಸಕ ಮಂಕಾಳ ವೈದ್ಯ ಅವರ ಹೆಸರನ್ನು ಪ್ರಸ್ತಾಪಿಸಲಾಯಿತು. ಬಳಿಕ ಸಿಎಂ ಡಿ.ಕೆ.ಶಿವಕುಮಾರ್ ಮತ್ತು ಸಚಿವ ಲಕ್ಷ್ಮಣ್ ಸವದಿ ಅವರು ಮಂಕಾಳು ವೈದ್ಯ ಅವರ ಹೆಸರನ್ನು ಅನುಮೋದಿಸಿದರು.

ಬಳಿಕ ಸದನ ಎಲ್ಲಾ ಸದಸ್ಯರ ಸರ್ವಾನುಮತದಿಂದ ಮಂಕಾಳ ವೈದ್ಯ ಅವರು ಉಪಸಭಾಧ್ಯಕ್ಷರಾಗಿ ಆಯ್ಕೆಯಾದರು. ಸ್ಪೀಕರ್ ಜಿ.ಎಸ್. ಪಾಟೀಲ್ ಅವರು ಧ್ವನಿ ಮತದ ನಂತರ ವೈದ್ಯ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಿದ್ದಾರೆ ಎಂದು ಘೋಷಿಸಿದರು.




ಉದಯವಾಹಿನಿ ಚಿತ್ರ

ಕೆಲವು ದಿನಗಳ ಹಿಂದೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆಯಲ್ಲಿ ರುದ್ರಪ್ಪ ಲಮಾಣಿ ಅವರು ಸೇರ್ಪಡೆಗೊಂಡ ನಂತರ ರಾಜೀನಾಮೆ ನೀಡಿದ ನಂತರ ಉಪಸಭಾಪತಿ ಸ್ಥಾನ ಖಾಲಿಯಾಗಿತ್ತು. ಈ ಹಿಂದೆ ಕಾಂಗ್ರೆಸ್ ಶಾಸಕ ಎ.ಎಸ್. ಪೊನ್ನಣ್ಣ ಅವರನ್ನು ಉಪಸಭಾಪತಿ ಹುದ್ದೆಗೆ ಪಕ್ಷದ

### ಕಾರ್ಯಕ್ಷಮತೆಗಾಗಿ ಅವರನ್ನು ಗೌರವ

ಉಮಾಶ್ರೀ ಅವರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಅಂಗವಿಕಲರ ಸಬಲೀಕರಣ, ಹಿರಿಯ ನಾಗರಿಕರ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಖಾತೆಗಳನ್ನು ನಿರ್ವಹಿಸಿದರು ಮತ್ತು 2016ರಲ್ಲಿ ಅವರ ಇಲಾಖೆಯ ಕಾರ್ಯಕ್ಷಮತೆಗಾಗಿ ಅವರನ್ನು ಗೌರವಿಸಲಾಯಿತು.

ನಾಮನಿರ್ದೇಶಿತರನ್ನಾಗಿ ಹೆಸರಿಸಿತ್ತು. ಆದರೆ ನಂತರ ಅವರನ್ನು ಕ್ಯಾಬಿನೆಟ್ ಸಚಿವರ ಸ್ಥಾನಮಾನದೊಂದಿಗೆ ಸಿಎಂ ಅವರ ರಾಜಕೀಯ ಕಾರ್ಯದರ್ಶಿಯಾಗಿ ನೇಮಿಸಲಾಯಿತು.. ನಂತರ ಸಿಎಂ ಮತ್ತು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಉಪ ಸಭಾಧ್ಯಕ್ಷರ ಪೀಠದಲ್ಲಿ ಕೂರಿಸಿದರು. ಕರ್ನಾಟಕ ವಿಧಾನ ಪರಿಷತ್ತಿನ ಉಪಾಧ್ಯಕ್ಷೆಯಾಗಿ ಕಾಂಗ್ರೆಸ್ ಎಂಎಲ್‌ಸಿ ಉಮಾಶ್ರೀ ಮಂಗಳವಾರ ಸರ್ವಾನುಮತದಿಂದ ಆಯ್ಕೆಯಾದರು.

> ಪರಿಷತ್ತಿನಲ್ಲಿ ಉಮಾಶ್ರೀ ಅವರನ್ನು ಅಭಿನಂದಿಸಿದ ಸಭಾನಾಯಕಿ ಯತೀಂದ್ರ ಸಿದ್ದರಾಮಯ್ಯ, ಬಡತನ ಮತ್ತು ಹಲವಾರು ಸವಾಲುಗಳನ್ನು ಮೆಟ್ಟಿ ನಿಂತ ನಟಿ ಮತ್ತು ರಾಜಕಾರಣಿಯಾಗಿ ತಮ್ಮನ್ನು ತಾವು ಸ್ಥಾಪಿಸಿಕೊಂಡ ಮಹಿಳೆಯರಿಗೆ ಅವರು ಮಾದರಿ ಎಂದು ಬಣ್ಣಿಸಿದರು.-ಯತೀಂದ್ರ ಸಿದ್ದರಾಮಯ್ಯ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ನಿಮ್ಮನ್ನು ನೀವೇ ಅನಗತ್ಯವಾಗಿ ದೂಷಿಸುವುದು ನಿಮ್ಮ ಚೈತನ್ಯವನ್ನು ಕುಗ್ಗಿಸಬಹುದು. ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ ವಿಶ್ರಾಂತಿಯನ್ನು ತರುತ್ತದೆ.

**ವೃಷಭ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಒಬ್ಬರು ಇನ್ನೊಬ್ಬರ ದೃಷ್ಟಿಕೋನವನ್ನು ಅರ್ಥಮಾಡಿಕೊಳ್ಳುವ ಮೂಲಕ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸಿ.

**ಮಿಥುನ** ನಿಮ್ಮ ಸುತ್ತಲಿರುವ ಮಹತ್ವದ ನಿರ್ಧಾರ ಕೈಗೊಳ್ಳುವ ಜನರಿಗೆ ನಿಮ್ಮ ಅಭಿಪ್ರಾಯಗಳನ್ನು ನೀಡಿದರೆ ನೀವು ಅದರಿಂದ ಗಳಿಸುವಿರಿ ನೀವು ನಿಮ್ಮ ಸಮರ್ಪಣೆ ಮತ್ತು ಪ್ರಾಮಾಣಿಕತೆಗೆ ಮೆಚ್ಚುಗೆ ಪಡೆಯಬಹುದು. ಒಳ್ಳೆಯ ದಿನ ಕಾನೂನು ಸಲಹೆ ಪಡೆಯಲು ವಕೀಲರನ್ನು ಭೇಟಿ ಮಾಡಿ.

**ಕರ್ಕಾಟಕ** ಇತರರ ವಿರುದ್ಧ ದ್ವೇಷಕಾರುವುದು ಮಾನಸಿಕ ಒತ್ತಡವನ್ನು ನೀಡುತ್ತದೆ. ಇವುಗಳು ಜೀವನವನ್ನು ವ್ಯರ್ಥಗೊಳಿಸುವುದರಿಂದ ಮತ್ತು ನಿಮ್ಮ ಸಾಮರ್ಥ್ಯವನ್ನು ಕೊಲ್ಲುವುದರಿಂದ ನೀವು ಈ ರೀತಿಯ ಆಲೋಚನೆಗಳನ್ನು ತಪ್ಪಿಸಬೇಕು. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ.

**ಸಿಂಹ** ನಿಮ್ಮ ಪ್ರಣಯದ ಸಂಬಂಧಕ್ಕೆ ಇಂದು ಹಾನಿಯಾಗುತ್ತದೆ. ಸಣ್ಣ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ನಷ್ಟವಾಗಬಹುದು. ಆದಾಗ್ಯೂ ನೀವು ಚಿಂತಿಸಬೇಕಾಗಿಲ್ಲ, ನಿಮ್ಮ ಪರಿಶ್ರಮ ಸರಿಯಾದ ದಿಕ್ಕಿನಲ್ಲಿ ಇದ್ದರೆ ನೀವು ಖಂಡಿತವಾಗಿಯೂ ಉತ್ತಮ ಫಲಿತಾಂಶಗಳನ್ನು ಪಡೆಯುತ್ತೀರಿ.

**ಕನ್ಯಾ** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಇಂದು ಹಣ ನಿಮ್ಮ ಕೈಯಲ್ಲಿ ಉಳಿಯುದಿಲ್ಲ, ಇಂದು ನೀವು ಹಣವನ್ನು ಉಳಿಸುವಲ್ಲಿ ಅನೇಕ ತೊಂದರೆಗಳನ್ನು ಎದುರಿಸಬೇಕಾಗುತ್ತದೆ ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

**ತುಲಾ** ಮಕ್ಕಳ ಸಂಗದಲ್ಲಿ ಶಾಂತಿ ಪಡೆಯಿರಿ. ನಿಮ್ಮ ಸ್ವಂತದ್ದಷ್ಟೇ ಅಲ್ಲದೇ ಬೇರೆಯವರ ಮಕ್ಕಳ ಚಿಕಿತ್ಸಕ ಶಕ್ತಿಗಳೂ ನಿಮಗೆ ಸಾಂತ್ವನ ನೀಡಬಹುದು ಮತ್ತು ನಿಮ್ಮ ಆತಂಕವನ್ನು ಶಮನಗೊಳಿಸಬಹುದು. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ.

**ವೃಶ್ಚಿಕ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ ಮತ್ತು ನೀವು ಇದನ್ನು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಬಳಸಬೇಕು. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ.

**ಧನಸ್ಸು** ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಹೊಸ ಹೂಡಿಕೆಗಳನ್ನು ಮಾಡುವಾಗ ಸ್ವತಂತ್ರರಾಗಿರಿ ಮತ್ತು ನಿಮ್ಮ ಸ್ವಂತ ನಿರ್ಧಾರಗಳನ್ನು ಕೈಗೊಳ್ಳಿ.

**ಮಕರ** ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಮನೆಯಲ್ಲಿ ಯಾವುದೇ ಕಾರ್ಯಕ್ರಮ ನಡೆಯುವ ಕಾರಣದಿಂದಾಗಿ ಇಂದು ನೀವು ನಿಮ್ಮ ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ, ಕಾರಣದಿಂದಾಗಿ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು.

**ಕುಂಭ** ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ಆಶೀರ್ವಾದ ಹಾಗೂ ಅದೃಷ್ಟ ನಿಮ್ಮ ಬಳಿ ಬರುತ್ತಿದ್ದ ಹಾಗೆ ನಿಮ್ಮ ಬಯಕೆಗಳು ಪೂರೈಸಲ್ಪಡುತ್ತವೆ – ಮತ್ತು ಹಿಂದಿನ ದಿನಗಳ ಶ್ರಮ ಈಗ ಫಲ ನೀಡುತ್ತದೆ.

**ಮೀನ** ನಿಮ್ಮ ಮಗುವಿನಂಥ ಮತ್ತು ಮುಗ್ಧ ವರ್ತನೆ ಕುಟುಂಬದ ಸಮಸ್ಯೆಯನ್ನು ಪರಿಹರಿಸುವಲ್ಲಿ ಒಂದು ಪ್ರಮುಖ ಪಾತ್ರ ವಹಿಸುತ್ತದೆ. ನಿಮ್ಮ ಪ್ರೀತಿಪಾತ್ರರೊಡನೆ ಪ್ರಯಾಣಕ್ಕೆ ಹೋಗುವ ಮೂಲಕ ನಿಮ್ಮ ಅಮೂಲ್ಯ ಕ್ಷಣಗಳನ್ನು ಪುನಃ ಜೀವಿಸಿ. ಇಂದು ನೀವು ಕೇಂದ್ರಬಿಂದುವಾಗಿರುತ್ತೀರಿ.

# ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ 19 ರಂದು ಪ್ರತಿಭಟನೆ

• **ಉದಯವಾಹಿನಿ ಆಳಂದ,**

ತಾಲ್ಲೂಕಿನ ನಿಂಬರ್ಗಾ ಮತ್ತು ದಂಗಾಪೂರ ಗ್ರಾಮ ಪಂಚಾಯತ್ ವ್ಯಾಪ್ತಿಗಳಲ್ಲಿ ಬರುವ ಎಲ್ಲಾ ಕಂದಾಯ ಗ್ರಾಮಗಳ ಮೂಲಭೂತ ಸೌಲಭ್ಯ, ಸೌಕರ್ಯ ಹಾಗೂ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ನಿಂಬರ್ಗಾ ಮತ್ತು ದಂಗಾಪೂರ ಗ್ರಾಮ ಪಂಚಾಯತ್ ಮುಂದೆ ಆ.19 ರಂದು ಬೆಳಿಗ್ಗೆ 11 ಗಂಟೆಗೆ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ನಿಂಬರ್ಗಾ ವಲಯ ಕಟ್ಟಡ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ಅಧ್ಯಕ್ಷರಾದ ಯಲ್ಲಪ್ಪ ಎಸ್ ಕಟ್ಟಿಮನಿ ಅವರು ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ. ನಿಂಬರ್ಗಾ ಮತ್ತು ದಂಗಾಪೂರ ಗ್ರಾಮ ಪಂಚಾಯತ್ ವ್ಯಾಪ್ತಿಗಳಲ್ಲಿ ಬರುವ ಎಲ್ಲಾ ಕಂದಾಯ ಗ್ರಾಮಗಳ ಗ್ರಾಮಸ್ಥರು ಪ್ರತಿಭಟನೆಯಲ್ಲಿ ಭಾಗವಹಿಸಿ ಪ್ರತಿಭಟನೆ ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿಕೊಂಡಿದ್ದಾರೆ.

# 10 ಪ್ರಕರಣ;42.66 ಲಕ್ಷ ಮೌಲ್ಯದ ಸ್ವತ್ತು ಜಪ್ತಿ: 18 ಜನರ ಬಂಧನ

• **ಉದಯವಾಹಿನಿ ಕಲಬುರಗಿ,:**

ಕ್ರೈಂ ಬ್ರ್ಯಾಂಚ್ ಪೊಲೀಸರಂತೆ ನಟಿಸುತ್ತ ಜ್ಯೋತಿಷಿಯೊಬ್ಬರ ಚಿನ್ನಾಭರಣ ದೋಚಿ ಪರಾರಿಯಾಗಿದ್ದ ಪ್ರಕರಣ ಸೇರಿದಂತೆ ಆಳಂದ ಹಾಗೂ ಶಹಬಾದ್ ಉಪವಿಭಾಗದ ಠಾಣಾ ವ್ಯಾಪ್ತಿಯ 10 ಪ್ರಕರಣಗಳನ್ನು ಜಿಲ್ಲಾ ಪೊಲೀಸರು ಭೇದಿಸಿದ್ದಾರೆ.

ಆಳಂದ ತಾಲ್ಲೂಕಿನ ನರೋಣಾ ಠಾಣಾ ವ್ಯಾಪ್ತಿಯ 1 ,ಶಹಬಾದ್ ಠಾಣೆ ವ್ಯಾಪ್ತಿಯ 4 ,ವಾಡಿ ಠಾಣೆ 3 ,ಚಿತ್ತಾಪುರ,ಮಾಡಬೂಳ ಠಾಣೆ ವ್ಯಾಪ್ತಿಯ ತಲಾ 1 ಸೇರಿದಂತೆ 10 ಪ್ರಕರಣಗಳಲ್ಲಿ 18 ಆರೋಪಿಗಳನ್ನು ಬಂಧಿಸಲಾಗಿದೆ.

ಚಿನ್ನಾಭರಣ,ನಗದು.ಬೈಕುಗಳು, ಸೇರಿದಂತೆ ಒಟ್ಟು 42.66 ಲಕ್ಷ ಮೌಲ್ಯದ ಸ್ವತ್ತುಗಳನ್ನು ಜಪ್ತಿ ಮಾಡಲಾಗಿದೆ. ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಅವರು ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದರು.ಪತ್ರಿಕಾಗೋಷ್ಠಿಯಲ್ಲಿ ಹೆಚ್ಚುವರಿ ಎಸ್ಪಿ ಮಹೇಶ ಮೇಘಣ್ಣನವರ,ಶಹಬಾದ ಡಿವೈಎಸ್‌ಪಿ ಶಂಕರಗೌಡ ಪಾಟೀಲ,ಆಳಂದ ಡಿವೈಎಸ್‌ಪಿ ತಮ್ಮರಾಯ ಪಾಟೀಲ ಅವರು ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು

# ಭಕ್ತ ಸಮೂಹದ ನಡುವೆ ಜರುಗಿದ ಯಡಿಯೂರು ಸಿದ್ದಲಿಂಗೇಶ್ವರ ತೊಟ್ಟಿಲು

• **ಉದಯವಾಹಿನಿ ಔರಾದ್ :**

ಪಟ್ಟಣದ ಉದ್ಭವಲಿಂಗ ಶ್ರೀ ಅಮರೇಶ್ವರ ದೇವಸ್ಥಾನದಲ್ಲಿ ಪವಿತ್ರ ಶ್ರಾವಣ ಮಾಸದ ಅಂಗವಾಗಿ ನಡೆಯುತ್ತಿರುವ ಶ್ರೀ ಯಡಿಯೂರು ಶ್ರೀ ಸಿದ್ದಲಿಂಗೇಶ್ವರ ಮಹಾ ಪುರಾಣ ಪ್ರವಚನ ಕಾರ್ಯಕ್ರಮದ ಐದನೇ ದಿನವಾದ ಸೋಮವಾರ ಭಕ್ತ ಸಮೂಹದ ನಡುವೆ ಶ್ರೀ ಸಿದ್ದಲಿಂಗೇಶ್ವರರ ತೊಟ್ಟಿಲು ಕಾರ್ಯಕ್ರಮ ಭಕ್ತಿ ವೈಭವದಿಂದ ಜರುಗಿತು. ಪ್ರವಚನಕಾರರಾದ ವೇದಮೂರ್ತಿ ಗುರುಪಾದಯ್ಯ ಶಾಸ್ತ್ರಿಗಳು ಸಾನ್ನಿಧ್ಯದಲ್ಲಿ ನಡೆಯುತ್ತಿರುವ ಶ್ರೀ ಸಿದ್ದಲಿಂಗೇಶ್ವರರ ಜೀವನ, ತತ್ವ ಹಾಗೂ ಶಿವಭಕ್ತಿಯ ಮಹತ್ವವನ್ನು ಸಾರುವ ಮಹಾ ಪುರಾಣ ಪ್ರವಚನ ಭಕ್ತರು ಶ್ರದ್ಧಾಭಕ್ತಿಯಿಂದ ಆಲಿಸಿದರು. ತೊಟ್ಟಿಲು ಕಾರ್ಯಕ್ರಮದ ಸಂದರ್ಭದಲ್ಲಿ ದೇವಸ್ಥಾನದಲ್ಲಿ ವಿಶೇಷ ಪೂಜೆ, ಭಜನೆ ಹಾಗೂ ಧಾರ್ಮಿಕ ವಿಧಿವಿಧಾನಗಳು ನೆರವೇರಿದವು.

ತೊಟ್ಟಿಲು ಕಾರ್ಯಕ್ರಮದಲ್ಲಿ ಮಹಿಳೆಯರು, ಮಕ್ಕಳು ಸೇರಿದಂತೆ ನೂರಾರು ಭಕ್ತರು ಪಾಲ್ಗೊಂಡು ಶ್ರೀ ಸಿದ್ದಲಿಂಗೇಶ್ವರರ ತೊಟ್ಟಿಲು ತೂಗಿ ದರ್ಶನ ಪಡೆದರು. ಸಂಗೀತ ಕಲಾವಿದರಾದ ಪುರುಷೋತ್ತಮ ದೇಸಾಯಿ ಅವರು ಸಂಗೀತ ಸೇವೆ ನೀಡಿದರು. ಶ್ರಾವಣ ಮಾಸದ ಅಂಗವಾಗಿ ಪ್ರತಿದಿನ ನಡೆಯುತ್ತಿರುವ ಮಹಾ ಪುರಾಣ ಪ್ರವಚನ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುತ್ತಿದ್ದು, ಕಾರ್ಯಕ್ರಮವು ಭಕ್ತಿ, ಶ್ರದ್ಧೆ ಮತ್ತು ಧಾರ್ಮಿಕ ಜಾಗೃತಿಗೆ ವೇದಿಕೆಯಾಗಿದೆ.

# ವಿ ಬಿ ಜಿ ರಾಮ್ ಜಿ ಯೋಜನೆಯ ಜಾಬ್ ಕಾರ್ಡ್ ಮೇಳಕ್ಕೆ ಸಹಾಯಕ ನಿರ್ದೇಶಕರಿಂದ ಅದ್ದೂರಿ ಚಾಲನೆ

• **ಉದಯವಾಹಿನಿ ಯಲಬುರ್ಗಾ :**

ವಿಬಿಜಿ ರಾಮ್ ಜಿ ಯೋಜನೆಯಡಿ ಕೂಲಿಕಾರರಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿರುವ ವಿಬಿ–ಜಿ ರಾಮ್ ಜಿ ಯೋಜನೆಯಡಿ ಜಾಬ್ ಕಾರ್ಡ್ ಮೇಳ ಅಭಿಯಾನಕ್ಕೆ ಮಾನ್ಯ ಸಹಾಯಕ ನಿರ್ದೇಶಕರಾದ ಹನಮಂತಗೌಡ ಪೊಲೀಸ್ ಪಾಟೀಲ್ ಅವರು ಕೂಲಿಕಾರರಿಗೆ ಗ್ಯಾರಂಟಿ ಕಾರ್ಡ್ ವಿತರಿಸುವ ಮೂಲಕ ಚಾಲನೆ ನೀಡಿದರು.

ತಾಲ್ಲೂಕಿನ ಹಿರೇಅರಳಿಹಳ್ಳಿ ಗ್ರಾಮ ಪಂಚಾಯತಿಯ ಹೊಸೂರ ಗ್ರಾಮದಲ್ಲಿ 2026–27 ನೇ ಸಾಲಿನ ವಿಬಿ–ಜಿ ರಾಮ್ ಜಿ ಯೋಜನೆಯಡಿ ಕೈಗೊಂಡಿರುವ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳದಲ್ಲಿದ್ದ 149 ಜನ ಕೂಲಿಕಾರರಿಗೆ ಜಾಬ್ ಕಾರ್ಡ್ ಗಳನ್ನು ವಿತರಿಸಿದರು.

ಬಳಿಕ ಮಾತನಾಡಿದ ಅವರು, ಆಗಸ್ಟ್ 15 ರಿಂದ ಸೆಪ್ಟೆಂಬರ್ 15 ರವರೆಗೆ ನಡೆಯಲಿರುವ ಜಾಬ್ ಕಾರ್ಡ್ ಮೇಳ ಅಭಿಯಾನದಡಿ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಜಾಬ್ ಕಾರ್ಡ್ ಗಳನ್ನು ವಿತರಿಸಲು ಈಗಾಗಲೇ ಪಿಡಿಒರವರಿಗೆ ತಿಳಿಸಲಾಗಿದೆ. ಅದರಂತೆ ಇಂದು ಹೊಸೂರ ಗ್ರಾಮದಲ್ಲಿ ಚಾಲನೆ ನೀಡಲಾಯಿತು ಎಂದು ತಿಳಿಸಿದರು.

ಉದಯವಾಹಿನಿ ಚಿತ್ರ



ತಾಲ್ಲೂಕಿನಲ್ಲಿ ಬರಗಾಲದ ಪರಿಸ್ಥಿತಿ ಇರುವ ಹಿನ್ನೆಲೆಯಲ್ಲಿ ಕೂಲಿಕಾರರಿಗೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸಲಾಗುತ್ತಿದೆ. ಜಾಬ್ ಕಾರ್ಡ್‌ಗಾಗಿ ಬೇಡಿಕೆ ಸಲ್ಲಿಸುವ ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ಹೊಸ ಜಾಬ್ ಕಾರ್ಡ್ ವಿತರಿಸಲಾಗುವುದು ಎಂದರು.

ಗ್ರಾಮೀಣ ಭಾಗದ ರೈತರ, ಕೂಲಿಕಾರರ ಮತ್ತು ಜೀವನೋಪಾಯ ಚಟುವಟಿಕೆಗಳ ಮೂಲಕ ಆರ್ಥಿಕ ಸದೃಢಕ್ಕಾಗಿ ಜಾರಿಯಾದ ವಿಬಿ ಜಿ ರಾಮ್ ಜಿ ಯೋಜನೆಯಿಂದ ಗ್ರಾಮದ ಸರ್ವಾಂಗೀಣ ಅಭಿವೃದ್ದಿಯಾಗಲಿದೆ. ವಿಬಿ ಜಿ ರಾಮ್ ಜಿ ಯೋಜನೆಯಡಿ ನಿರ್ದಿಷ್ಟಪಡಿಸಿದ 318 ಕಾಮಗಾರಿಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಜುಲೈ 1 ರಿಂದ ಪ್ರತಿಯೊಬ್ಬ ಕೂಲಿಕಾರರಿಗೂ 382 ರೂಪಾಯಿ ಕೂಲಿಮೊತ್ತ ಹಾಗೂ 125 ದಿನಗಳ ಕೆಲಸ ಸಿಗಲಿದೆ. ಇದರ ಸದುಪಯೋಗ ಎಲ್ಲರೂ ಪಡೆದುಕೊಳ್ಳಬೇಕು. ಗ್ರಾಪಂಗಳಲ್ಲಿ ಯೋಜನೆಯಡಿ ನಿರಂತರ ಕೆಲಸ ನೀಡಲಾಗುವುದು. ನಮೂನೆ 6 ನೀಡಿ ಕೆಲಸ ಪಡೆಯುವಂತೆ ಕಾಯಕ ಬಂಧುಗಳಿಗೆ ಸೂಚನೆ ನೀಡಿದರು. ವೈಯಕ್ತಿಕ ಕಾಮಗಾರಿಗಳನ್ನು ರೈತರು ತಮ್ಮ ಜಮಿನುಗಳಲ್ಲಿ ಮಾಡಿಕೊಂಡು ಆರ್ಥಿಕವಾಗಿ ಸದೃಡರಾಗಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಂತ್ರಿಕ ಸಂಯೋಜಕರಾದ ಸಂತೋಷ ನಂದಾಪುರ, ಐಇಸಿ ಸಂಯೋಜಕರಾದ ಶರಣಪ್ಪ ಹಾಳಕೇರಿ, ಪಿಡಿಒರಾದ ಬಸವರಾಜ ಅವರು ವಿಬಿಜಿ ರಾಮ್ ಜಿ ಯೋಜನೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡಲಾಯಿತು. ಈ ವೇಳೆ ಕಂಪ್ಯೂಟರ್ ಆಪರೇಟರ್ ಶೇಖರ, ಜಿಕೆಎಂ ಶಾಂತಮ್ಮ, ಕಾಯಕ ಬಂಧುಗಳು, 149 ಕೂಲಿಕಾರರು ಹಾಜರಿದ್ದರು.

# ಕೇಂದ್ರ ಸರ್ಕಾರದ ಅನುದಾನದಲ್ಲಿ ರಾಜ್ಯ ಸರ್ಕಾರ ನಡೆಯುತ್ತಿದೆ: ಸಂಸದ ಬಿ.ವೈ ರಾಘವೇಂದ್ರ

## ಎಸ್‌ಟಿ ನಿಗಮದ 7,187 ಕೋಟಿ ಹಣದಲ್ಲಿ 788 ಕೋಟಿಯನ್ನು ಬೆಂಗಳೂರಿನ ಎಂ.ಜಿ. ರಸ್ತೆಯ ಯುಎನ್‌ಐ ಬ್ಯಾಂಕ್ ಶಾಖೆಗೆ ವರ್ಗಾಹಿಸಲಾಗಿತ್ತು

• **ಉದಯವಾಹಿನಿ ಶಿವಮೊಗ್ಗ:**

ರಾಜ್ಯ ಸರ್ಕಾರವು ಕೇಂದ್ರ ಸರ್ಕಾರ ನೀಡುವ ಅನುದಾನದಿಂದಲೇ ನಡೆಯುತ್ತಿದ್ದು, ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದು ಸಂಸದ ಬಿ.ವೈ. ರಾಘವೇಂದ್ರ, ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.


ಶಿವಮೊಗ್ಗ ಜಿಲ್ಲಾ ಬಿಜೆಪಿಯಿಂದ ಡಿಸಿ ಕಚೇರಿ ಎದುರು ಸಚಿವ ನಾಗೇಂದ್ರ ಅವರನ್ನು ವಜಾಗೊಳಿಸುವಂತೆ ಆಗ್ರಹಿಸಿ ನಡೆಯುತ್ತಿರುವ ಎರಡನೇ ದಿನದ ಪ್ರತಿಭಟನೆಯಲ್ಲಿ ಭಾಗವಹಿಸಿ

1 : ವಂದೇ ಮಾತರಂ ಸರಿಪಡಿಸಲು
2 : ಸೋನಿಯಾ ಅಕ್ಕನಿಗೆ ಬರುತ್ತದೆ
3 : ಹಣವನ್ನು ಲೂಟಿ ಮಾಡುತ್ತಿದೆ

ಮಾತನಾಡಿದ ಅವರು, ಸ್ವಾತಂತ್ರ್ಯ ದಿನಾಚರಣೆಯಂದು ಎಐಸಿಸಿ ಅಧಿನಾಯಕಿ ಸೋನಿಯಾ ಗಾಂಧಿ ಅವರು ಕಚೇರಿಯಲ್ಲಿ ವಂದೇ ಮಾತರಂ ಗೀತೆಯನ್ನು ಪೂರ್ಣವಾಗಿ ಹಾಡದೇ, ಗೀತೆಯನ್ನು ನಿಲ್ಲಿಸಬೇಕು ಎಂದು ಹೇಳುತ್ತಿರುವುದನ್ನು ನಾವೆಲ್ಲರೂ ನೋಡಿದ್ದೇವೆ. ಸೋನಿಯಾ ಗಾಂಧಿ ಅವರು 150 ವರ್ಷಗಳ ದೇಶಭಕ್ತಿ ಗೀತೆಗೆ ಅಪಮಾನ ಮಾಡಿದ್ದಾರೆ ಎಂದು ಕಿಡಿಕಾರಿದರು.

ಸೋನಿಯಾ ಗಾಂಧಿ ಅವರ ನಡೆಯನ್ನು ಅವರ ಪಕ್ಷದವರು ಸಮರ್ಥಿಸಿಕೊಂಡಿದ್ದಾರೆ. ಅವರು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಚೇರ್ ಕೊಡು ಎಂದು ಹೇಳುತ್ತಿದ್ದರು. ಅಲ್ಲದೆ, ವಂದೇ ಮಾತರಂ ಅನ್ನು ತಪ್ಪಾಗಿ ಹಾಡುತ್ತಿದ್ದರು. ಅದನ್ನು ಸರಿಪಡಿಸಲು ಹೇಳುತ್ತಿದ್ದರು ಎಂದು ಕಾಂಗ್ರೆಸ್‌ನವರು ಸಮರ್ಥಿಸಿಕೊಳ್ಳುತ್ತಿದ್ದಾರೆ. ವಂದೇ ಮಾತರಂ ಸರಿಪಡಿಸಲು ನಮ್ಮ ಸೋನಿಯಾ ಅಕ್ಕನಿಗೆ ಬರುತ್ತದೆಯೇ? ಎಂದು ಪ್ರಶ್ನಿಸಿದರು. ರಾಜ್ಯ ಸರ್ಕಾರವು ಗ್ಯಾರಂಟಿಗಳ ಹೆಸರಿನಲ್ಲಿ ಅಧಿಕಾರಕ್ಕೆ ಬಂದು ಇದೀಗ ಹಣವನ್ನು ಲೂಟಿ ಮಾಡುತ್ತಿದೆ. ಎಸ್‌ಟಿ ನಿಗಮದ 7,187 ಕೋಟಿ ಹಣದಲ್ಲಿ 788 ಕೋಟಿಯನ್ನು ಬೆಂಗಳೂರಿನ ಎಂ.ಜಿ. ರಸ್ತೆಯ ಯುಎನ್‌ಐ ಬ್ಯಾಂಕ್ ಶಾಖೆಗೆ ವರ್ಗಾಹಿಸಲಾಗಿತ್ತು. ಈ ಹಣವನ್ನು ನಗದು, ಚಿನ್ನದ ಬಿಸ್ಕೇಟ್ ಹಾಗೂ ಹವಾಲಾ ಮೂಲಕ ವರ್ಗಾವಣೆ ಮಾಡುವ ಷಡ್ಯಂತ್ರವನ್ನೂ ಮಾಡುತ್ತಾರೆ.

ಉದಯವಾಹಿನಿ ಚಿತ್ರ




> ಬದಲಿಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಹೇಳಿ ಚುನಾವಣೆ ಮಾಡುವಂತೆ ಸೂಚಿಸುತ್ತಿದ್ದಾರೆ. ಅಂದರೆ ಕರ್ನಾಟಕಕ್ಕೆ 15ನೇ ಹಣಕಾಸು ಯೋಜನೆಯ ಹಣ ನೀಡಿಲ್ಲ. ನೀವು ಚುನಾವಣೆ ಮಾಡಿದ್ರೆ, ನೀಡುತ್ತೇವೆ ಎಂದು ಹೇಳಿದಕ್ಕೆ ರಾಜ್ಯ ಸರ್ಕಾರ ಚುನಾವಣೆ ನಡೆಸಲು ಈಗ ಮೀಸಲಾತಿಯನ್ನು ಘೋಷಿಸಿದೆ ಎಂದರು.
> –ಸಂಸದ ಬಿ.ವೈ ರಾಘವೇಂದ್ರ

> ನಮ್ಮದು ಯಾವುದೇ ಸಮಾಜದ ವಿರುದ್ಧದ ಹೋರಾಟವಲ್ಲ. ಅದೇ ಸಮಾಜದವರಾಗಿ, ಅದೇ ಸಮಾಜದ ಹಣವನ್ನು ತಿಂದು ವಾಲ್ಮೀಕಿ ಹೆಸರಿಗೆ ಮಸಿ ಬಳಿಯುವ ಕೆಲಸ ಮಾಡಲಾಗುತ್ತಿದೆ. ಎಸ್‌ಇಪಿ/ಟಿಎಸ್‌ಪಿ ಹಣವನ್ನು ದುರುಪಯೋಗಪಡಿಸಿಕೊಳ್ಳುವ ಕೆಲಸ ನಡೆದಿದೆ ಎಂದು ಆರೋಪಿಸಿದರು.
> –ಸಂಸದ ಬಿ.ವೈ ರಾಘವೇಂದ್ರ

**5 ಕೆ.ಜಿ. ಅಕ್ಕಿಯನ್ನು ಕೇಂದ್ರ ಸರ್ಕಾರ ನೀಡುತ್ತಿದೆ**

ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ನಡೆದಿಲ್ಲ. ಅನ್ನಭಾಗ್ಯ ಯೋಜನೆಯ ಹೆಸರಿನಲ್ಲಿ ಕೇಂದ್ರ ಸರ್ಕಾರ ನೀಡುವ 5 ಕೆ.ಜಿ. ಅಕ್ಕಿಯನ್ನೇ ರಾಜ್ಯ ಸರ್ಕಾರ ನೀಡುತ್ತಿದೆ. ಗ್ರಾಮ ಪಂಚಾಯಿತಿ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಮುಂದಾಗುತ್ತಿಲ್ಲ.

ನಂತರ ಈ ಹಣ ಬಳ್ಳಾರಿ ಸುತ್ತಮುತ್ತಲಿನ ಪೆಟ್ರೋಲ್ ಬಂಕ್‌ಗಳಿಗೆ ಹೋಗುತ್ತದೆ. ಈ ಹಣವನ್ನು 2024ರ ಲೋಕಸಭಾ ಚುನಾವಣೆಗೆ ಬಳಸಲಾಗಿದೆ. ಇದು ಇಡಿ ತನಿಖೆಯಲ್ಲಿ ಸಾಬೀತಾಗಿದೆ ಹಾಗೂ ತನಿಖೆ ಇನ್ನೂ ಮುಂದುವರಿದಿದೆ ಎಂದು ಹೇಳಿದರು. ಮುಖ್ಯಮಂತ್ರಿಗಳು ತಮ್ಮ ಸಚಿವ ಸಂಪುಟವನ್ನು ತಾವೇ ಸದನಕ್ಕೆ ಪರಿಚಯಿಸಿ ಕೊಟ್ಟಿದ್ದಾರೆ.

ಈ ವಿಚಾರವಾಗಿ ಸದನದ ಒಳಗೆ ಹಾಗೂ ಹೊರಗೆ ಪ್ರತಿಭಟನೆಗಳು ನಡೆಯುತ್ತಿದ್ದರೂ ಸಚಿವ ನಾಗೇಂದ್ರ ಅವರು ಈ ಬಗ್ಗೆ ಏನೂ ಮಾತನಾಡುತ್ತಿಲ್ಲ. ಜಾಮೀನಿನ ಮೇಲೆ ಬಂದವರಿಗೆ ನೀಚಗೆಟ್ಟ ಸರ್ಕಾರ ಸಚಿವ ಸ್ಥಾನ ನೀಡಿದೆ. ಜಾಮೀನಿನ ಮೇಲೆ ಇದ್ದವರು ದೆಹಲಿಗೆ ತೆರಳಿ ಸಚಿವ ಸ್ಥಾನಕ್ಕಾಗಿ ಲಾಬಿ ಮಾಡಿಕೊಂಡು ಬಂದಿದ್ದಾರೆ. ರಾಜ್ಯದ ಜನತೆ ಕಾಂಗ್ರೆಸ್‌ಗೆ ಬಹುಮತ ನೀಡಿದ್ದರೂ, ಏನು ಬೇಕಾದರೂ ಮಾಡಬಹುದು ಎಂದು ದರ್ಬಾರ್ ರೀತಿ ಸರ್ಕಾರ ನಡೆಸಬಹುದು ಎಂದು ನೀವು ನಡೆದುಕೊಳ್ಳುತ್ತಿದ್ದೀರಿ ಎಂದು ವಾಗ್ದಾಳಿ ನಡೆಸಿದರು.

# ಬಾಕಿ ಬಿಲ್ ಪಾವತಿಗೆ ಆಗ್ರಹಿಸಿ ಗುತ್ತಿಗೆದಾರರ ಧರಣಿ

• **ಉದಯವಾಹಿನಿ ಕಲಬುರಗಿ,**

ಮಹಾನಗರ ಪಾಲಿಕೆಯ 15ನೇ ಹಣಕಾಸು ಯೋಜನೆಯಡಿ ಪೂರ್ಣಗೊಂಡ ಕಾಮಗಾರಿಗಳ ಬಾಕಿ ಬಿಲ್‌ಗಳನ್ನು ಪಾವತಿಸುವಂತೆ ಒತ್ತಾಯಿಸಿ ಮಹಾನಗರ ಪಾಲಿಕೆ ಗುತ್ತಿಗೆದಾರರ ಅಭಿವೃದ್ಧಿ ಪರ ಕಲ್ಯಾಣ ಸಂಘದ ಮುಖಂಡರು ಮಹಾನಗರ ಪಾಲಿಕೆ ಕಚೇರಿ ಮುಂದೆ ಧರಣಿ ನಡೆಸಿದರು.

15ನೇ ಹಣಕಾಸು ಯೋಜನೆಯಡಿ 2024–25ರ 2ನೇ ಕಂತಿನ ಮತ್ತು 2025–26ರ ಮೊದಲ ಕಂತಿನ ಪೂರ್ಣಗೊಂಡ ಕಾಮಗಾರಿಗಳ ಬಿಲ್‌ಗಳನ್ನು ಒಂದು ವರ್ಷ ಕಳೆದರೂ ಪಾವತಿಸಲಾಗಿಲ್ಲ. ಸಣ್ಣ ಗುತ್ತಿಗೆದಾರರು ಸಾಲ ಪಡೆದು ಕೆಲಸ ಮಾಡಿದ್ದಾರೆ. ಸಾಲಗಾರರ ಕಿರುಕುಳ ಹೆಚ್ಚಿರುವುದರಿಂದ ಬಾಕಿ ಬಿಲ್‌ಗಳನ್ನು ಬೇಗ ಪಾವತಿಸಬೇಕೆಂದು ಒತ್ತಾಯಿಸಿದರು.15ನೇ ಹಣಕಾಸು ಅನುದಾನದಲ್ಲಿ ಹಣವಿಲ್ಲದಿದ್ದರೆ, ಬೇರೆ ಯಾವುದಾದರೂ ಅನುದಾನದಲ್ಲಿ ಲಭ್ಯವಿರುವ ಹಣವನ್ನು ಸರಿಹೊಂದಿಸಿ ಬಿಲ್‌ಗಳನ್ನು ಪಾವತಿಸಬೇಕು. ನಮ್ಮ ಬಿಲ್‌ಗಳನ್ನು ಪಾವತಿಸದಿದ್ದರೆ, ಉಳಿದಿರುವ ಏಕೈಕ ಆಯ್ಕೆ ಆತ್ಮಹತ್ಯೆ ಎಂದು

ಉದಯವಾಹಿನಿ ಚಿತ್ರ



ಪ್ರತಿಭಟನಾಕಾರರು ಎಚ್ಚರಿಸಿದರು.ಹಣ ವಿಳಂಬವಾದರೆ, ಕಾಮಗಾರಿಗಳಿಗೆ ಟೆಂಡರ್ಗಳನ್ನು ಏಕೆ ಕರೆಯಬೇಕು ?. ಹಣ ಬಂದ ನಂತರ ಟೆಂಡರ್ಗಳನ್ನು ಕರೆಯಬೇಕು ಮತ್ತು ಕೆಲಸವನ್ನು ಪ್ರಾರಂಭಿಸಬೇಕು.

ಕೇವಲ ಟೆಂಡರ್ಗಳನ್ನು ಕರೆದು ಎಫ್‌ಎಸ್‌ಡಿ ಮತ್ತು ಕಡಿಮೆ ಡಿ.ಡಿ. ಮಾಡುವ ಮೂಲಕ ಗುತ್ತಿಗೆದಾರರನ್ನು ಏಕೆ ತೊಂದರೆಗೊಳಿಸಬೇಕು ? ಒಂದು ವಾರದೊಳಗೆ ಗುತ್ತಿಗೆದಾರರ ಬಾಕಿ ಬಿಲ್ ಪಾವತಿ ಮಾಡದಿದ್ದರೆ ಮತ್ತೆ ಪಾಲಿಕೆ ಎದುರು ಧರಣಿ ನಡೆಸಿ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕಿ ಬೀಗ ಜಡಿಯುವುದಾಗಿ ಎಚ್ಚರಿಸಿದರು.

# ಅನುಮತಿ ಇಲ್ಲದೆ ಕ್ಲಿನಿಕ್ ನಡೆಸುತ್ತಿರುವ ಆರ್‌ಎಂಪಿಗಳ ವಿರುದ್ಧ ಕ್ರಮಕ್ಕೆ ಮನವಿ

• **ಉದಯವಾಹಿನಿ ಬಳ್ಳಾರಿ, :**

ಸಂಡೂರು ತಾಲ್ಲೂಕಿನ ತೋರಣಗಲ್ಲು ಹೋಬಳಿಯಲ್ಲಿ ಅನುಮತಿ ಇಲ್ಲದೆ ಕ್ಲಿನಿಕ್ಗಳನ್ನು ನಡೆಸುತ್ತಿರುವ ಆರ್‌ಎಂಪಿ ವೈದ್ಯರ ವಿರುದ್ಧ ಕ್ರಮ ಕೈಗೊಂಡು, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಅಕ್ರಮ ಕ್ಲಿನಿಕ್ಗಳನ್ನು ಮುಚ್ಚಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ (ಕಾವಲುಪಡೆ) ಯುವ ಘಟಕದ ಪದಾಧಿಕಾರಿಗಳು ಜಿಲ್ಲಾ ಆರೋಗ್ಯ, ಕುಟುಂಬ ಕಲ್ಯಾಣಾಧಿಕಾರಿಗೆ ಮನವಿ ಸಲ್ಲಿಸಿದ್ದಾರೆ.ತೋರಣಗಲ್ಲು ಹೋಬಳಿಯಲ್ಲಿ ಸುಮಾರು ಐವರು ಆರ್‌ಎಂಪಿ ವೈದ್ಯರು ಹಾಗೂ ಬಿಹಾರದಿಂದ ಬಂದಿರುವ ಕೆಲವರು ವೈದ್ಯಕೀಯ ಸೇವೆ ನೀಡುತ್ತಿದ್ದಾರೆ. ಇವರಲ್ಲಿ ಕೆಲವರಿಗೆ ಕ್ಲಿನಿಕ್ ನಡೆಸಲು ಅಗತ್ಯವಿರುವ ಸರ್ಕಾರದ ಅನುಮತಿ ಇಲ್ಲದಿದ್ದರೂ ಬಹಿರಂಗವಾಗಿ ಕ್ಲಿನಿಕ್ ನಡೆಸುತ್ತಿದ್ದಾರೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ. ಚಿಕಿತ್ಸೆಗಾಗಿ ಬರುವ ಸಾರ್ವಜನಿಕರಿಂದ 500 ರಿಂದ 700 ರವರೆಗೆ ಶುಲ್ಕ ವಸೂಲಿ ಮಾಡಲಾಗುತ್ತಿದೆ. ಈ ಕುರಿತು ಪ್ರಶ್ನಿಸಿದ ಸಾರ್ವಜನಿಕರಿಗೆ ಸ್ಥಳೀಯ ರೌಡಿಗಳ ಮೂಲಕ ಬೆದರಿಕೆ

ಉದಯವಾಹಿನಿ ಚಿತ್ರ



ಹಾಕಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ.

ಇದರಿಂದ ಸಾರ್ವಜನಿಕರಲ್ಲಿ ಆತಂಕ ಉಂಟಾಗಿದ್ದು, ಆರೋಗ್ಯ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅಕ್ರಮವಾಗಿ ನಡೆಯುತ್ತಿರುವ ಕ್ಲಿನಿಕ್ಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಅನುಮತಿ ಇಲ್ಲದೆ ವೈದ್ಯಕೀಯ ಸೇವೆ ನೀಡುತ್ತಿರುವವರ ಅರ್ಹತೆ ಹಾಗೂ ಕ್ಲಿನಿಕ್ಗಳ ನೋಂದಣಿ ಸೇರಿದಂತೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ, ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಕ್ಲಿನಿಕ್ಗಳನ್ನು ಮುಚ್ಚಿಸಿ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

# ಬಸರಕೋಡದ ಪವಾಡ ಬಸವೇಶ್ವರ ಬೆಳ್ಳಿ ಗಟ್ಟಿ ಹಸ್ತಾಂತರ: ಕಳ್ಳರ ಪಾಲಾಗಿದ್ದ 'ಪವಾಡ ಮುತ್ಯಾ' ಮರಳಿ ಊರಿಗೆ!

• **ಉದಯವಾಹಿನಿ ಮುದ್ದೇಬಿಹಾಳ:**

ತಾಲ್ಲೂಕಿನ ಐತಿಹಾಸಿಕ ಬಸರಕೋಡ ಗ್ರಾಮದ ಶ್ರೀ ಪವಾಡ ಬಸವೇಶ್ವರ ದೇವಾಲಯದಲ್ಲಿ ಜುಲೈ 5 ರಂದು ಕಳ್ಳತನವಾಗಿದ್ದ 32 ಕೆಜಿ ತೂಕದ ಬೆಳ್ಳಿ ಪ್ರತಿಮೆಯ ಮುಖ ಕವಚದ ಪ್ರಕರಣವನ್ನು ಪೊಲೀಸರು ಯಶಸ್ವಿಯಾಗಿ ಭೇದಿಸಿದ್ದಾರೆ. ಕಳ್ಳತನ ಮಾಡಿದ ಬೆಳ್ಳಿಯನ್ನು ಕರಗಿಸಿ ಗಟ್ಟಿಯನ್ನಾಗಿ ಪರಿವರ್ತಿಸಿ ಗುಜರಾತ್‌ನಲ್ಲಿ ಅಡಗಿದ್ದ ಮೂವರು ಪ್ರಮುಖ ಆರೋಪಿಗಳನ್ನು ಪೊಲೀಸರು ಬಂಧಿಸಿ, ಕದ್ದ ಮಾಲನ್ನು ನ್ಯಾಯಾಲಯಕ್ಕೆ ಒಪ್ಪಿಸಿದ್ದರು.

ಕಾನೂನು ಪ್ರಕ್ರಿಯೆಗಳ ನಂತರ ರಿಕವರಿಯಾದ ಬೆಳ್ಳಿಯನ್ನು ಸೋಮವಾರ (ಆಗಸ್ಟ್ 17) ದೇವಾಲಯದ ಆಡಳಿತ ಮಂಡಳಿಗೆ ಹಸ್ತಾಂತರಿಸಲಾಗಿದೆ.ಸಿಪಿಐ ಮಹಮ್ಮದ್ ಫಸಿಯುದ್ದಿನ್ ಅವರು ದೇವಾಲಯದ ಆಡಳಿತ ಮಂಡಳಿ ಅಧ್ಯಕ್ಷ ಕೆ. ವೈ. ಬಿರಾದಾರ, ಕಾರ್ಯದರ್ಶಿ ಎಸ್. ಬಿ. ನಾಡಗೌಡ, ಸದಸ್ಯರಾದ ಶ್ರೀಶೈಲ ಮೇಟಿ ಹಾಗೂ ಮಲ್ಲಣ್ಣ ಮೇಟಿ ಅವರಿಗೆ ಧಾರ್ಮಿಕ ವಿಧಿವಿಧಾನಗಳೊಂದಿಗೆ ಬೆಳ್ಳಿ ಗಟ್ಟಿಯನ್ನು ಹಸ್ತಾಂತರಿಸಿದರು.

ಈಗಾಗಲೇ ಸೋಲಾಪುರದ ನುರಿತ ಕುಶಲಕರ್ಮಿಗಳೊಂದಿಗೆ ಮಾತುಕತೆ ನಡೆಸಲಾಗಿದೆ. ಸದ್ಯ ಹಳೆಯ ಬೆಳ್ಳಿ ಪ್ರತಿಮೆಯನ್ನೇ ಕರ್ತೃ ಗದ್ದುಗೆಯ ಮೇಲೆ ಪೂಜಿಸಲಾಗುತ್ತಿದೆ, ಎಂದು ತಿಳಿಸಿದರು.

ದೇವಾಲಯದ ಸುರಕ್ಷತೆಯ ದೃಷ್ಟಿಯಿಂದ 20ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಿ ಬಿಗಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ವಿವರಿಸಿದರು.

ಉದಯವಾಹಿನಿ ಚಿತ್ರ



**ಗ್ರಾಮದಲ್ಲಿ ಸಂಭ್ರಮದ ವಾತಾವರಣ, ಭವ್ಯ ಮೆರವಣಿಗೆ;**

ರಿಕವರಿಯಾದ ಬೆಳ್ಳಿಯನ್ನು ಆಡಳಿತ ಮಂಡಳಿಯವರು ಗ್ರಾಮಕ್ಕೆ ತರುತ್ತಿದ್ದಂತೆ ಸಾವಿರಾರು ಭಕ್ತರು ಮಂಗಲವಾದ್ಯಗಳೊಂದಿಗೆ ಭವ್ಯ ಮೆರವಣಿಗೆಯ ಮೂಲಕ ಸ್ವಾಗತಿಸಿದರು. 'ಪವಾಡ ಮುತ್ಯಾ ಮರಳಿ ಊರಿಗೆ ಬಂದ' ಎಂಬ ಭಾವನೆಯಿಂದ ಭಕ್ತರು ಬೆಳ್ಳಿ ಗಟ್ಟಿಗಳಿಗೆ ವಿಶೇಷ ಪೂಜೆ ಸಲ್ಲಿಸಿ ಸಂಭ್ರಮಿಸಿದರು. ಆಗಮಿಸಿದ ಎಲ್ಲಾ ಭಕ್ತಾದಿಗಳಿಗೆ ವಿಶೇಷ ಮಹಾಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.

**ಜಾತ್ರೆ ಒಳಗಾಗಿ ನೂತನ ಬೆಳ್ಳಿ ಪ್ರತಿಮೆ ಪ್ರತಿಷ್ಠಾಪನೆ;**

ಮಾಧ್ಯಮಗಳೊಂದಿಗೆ ಮಾತನಾಡಿದ ಆಡಳಿತ ಮಂಡಳಿ ಅಧ್ಯಕ್ಷ ಕೆ. ವೈ. ಬಿರಾದಾರ ಹಾಗೂ ಸದಸ್ಯ ಶ್ರೀಶೈಲ ಮೇಟಿ, ಒಂದು ತಿಂಗಳ ಹಿಂದೆ ಕಳ್ಳತನವಾಗಿದ್ದ ದೇವರ ಪ್ರತಿಮೆಯ ಬೆಳ್ಳಿ ಗಟ್ಟಿಯು ಪವಾಡ ಮುತ್ಯಾನ ವಾರವಾದ ಸೋಮವಾರವೇ ಮರಳಿ ಕೈಸೇರಿರುವುದು ಅಪಾರ ಸಂತಸ ತಂದಿದೆ. ಭಕ್ತರ ಇಚ್ಛೆಯಂತೆ ರಿಕವರಿಯಾದ ಬೆಳ್ಳಿಯೊಂದಿಗೆ ಭಕ್ತರಿಂದ ಸಂಗ್ರಹವಾಗುವ ದೇಣಿಗೆಯನ್ನು ಸೇರಿಸಿ ನೂತನ ಬೆಳ್ಳಿ ಪ್ರತಿಮೆಯನ್ನು ತಯಾರಿಸಲಾಗುವುದು. ಮುಂಬರುವ ಜಾತ್ರೆಯೊಳಗಾಗಿ ಕರ್ತೃ ಗದ್ದುಗೆಯ ಮೇಲೆ ನೂತನ ಪ್ರತಿಮೆಯನ್ನು ಪ್ರಾಣ ಪ್ರತಿಷ್ಠಾಪನೆ ಮಾಡಲಾಗುವುದು.

# ಬರದಲ್ಲಿ ತಮ್ಮ ಬೆಳೆ ಒಣಗಿದರೂ, ಉಚಿತ ಕುಡಿಯುವ ನೀರು ಕೊಡುತ್ತಿರುವ ಕುಟುಂಬ!

## ಕುರುಬಗಟ್ಟಿ ಗ್ರಾಮದಲ್ಲಿ ಉಳ್ಳೇಗಡ್ಡಿ ಕುಟುಂಬಕ್ಕೆ ಸೇರಿದ ಕೊಳವೆ ಬಾವಿಯಲ್ಲಿ ಸ್ವಲ್ಪ ಮಟ್ಟಿಗೆ ನೀರು ಬರುತ್ತಿದೆ

• **ಉದಯವಾಹಿನಿ ಬೆಳಗಾವಿ:**

ಮಳೆ ಕೈಕೊಟ್ಟಿದ್ದರಿಂದ ಆ ಊರಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿತ್ತು. ಅದರಲ್ಲೂ ಗ್ರಾಮದ ಹೊರ ವಲಯದ 50ಕ್ಕೂ ಅಧಿಕ ಮನೆಗಳು ಹನಿ ನೀರಿಗೂ ಪರದಾಡಬೇಕಿತ್ತು. ಇಂಥ ಸಂದಿಗ್ದ ಸಂದರ್ಭದಲ್ಲಿ ಅಲ್ಲೊಂದು ಕುಟುಂಬ ತಮ್ಮ ಕೊಳವೆಬಾವಿ ಮೂಲಕ ಅವರಿಗೆ ಉಚಿತವಾಗಿ ನೀರು ಕೊಡುತ್ತಿದೆ. ತಮ್ಮ ಬೆಳೆಗಳು ಒಣಗುತ್ತಿದ್ದರೂ, ಜನರ ನೀರಿನ ದಾಹ ತೀರಿಸುತ್ತಿರುವ ಇವರ

1 : ನೀರಿಗೂ ಸಂಕಷ್ಟ ಎದುರಾಗಿದೆ
2 : ಪುಣ್ಯದ ಕೆಲಸ ಮಾಡುತ್ತಿದ್ದಾರೆ
3 : ಹಲವು ವರ್ಷ ಉತ್ತಮ ಮಳೆ

ಮಾನವೀಯ ಕಾರ್ಯ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರವಾಗಿದೆ. ಯರಗಟ್ಟಿ ತಾಲೂಕಿನ ಕುರುಬಗಟ್ಟಿ ಗ್ರಾಮದ ಪ್ರಕಾಶ ಉಳ್ಳೇಗಡ್ಡಿ ಅವರ ಕುಟುಂಬ ಕಳೆದ 10 ವರ್ಷಗಳಿಂದ ನೀರು ಪೂರೈಸುತ್ತಿದೆ. ಜಿಲ್ಲೆಯ 15 ತಾಲ್ಲೂಕುಗಳ ಪೈಕಿ ಯರಗಟ್ಟಿ, ಸವದತ್ತಿ ಮತ್ತು ರಾಮದುರ್ಗ ತಾಲ್ಲೂಕುಗಳಲ್ಲಿ ಮಳೆ ಕೊರತೆಯಿಂದ ಒಂದೆಡೆ ಬೆಳೆ ಹಾನಿ ಆಗುತ್ತಿದ್ದರೆ, ಮತ್ತೊಂದೆಡೆ ಕುಡಿಯುವ ನೀರಿಗೂ ಸಂಕಷ್ಟ ಎದುರಾಗಿದೆ. ಬಾವಿ, ಕೊಳವೆ ಬಾವಿಗಳು ನೀರಿಲ್ಲದೇ ಭತ್ತಿ ಹೋಗಿವೆ. ಇದು ಜನರನ್ನು ಚಿಂತೆಗೀಡು ಮಾಡಿದೆ.

ಕುರುಬಗಟ್ಟಿ ಗ್ರಾಮದಲ್ಲಿ ಉಳ್ಳೇಗಡ್ಡಿ ಕುಟುಂಬಕ್ಕೆ ಸೇರಿದ ಕೊಳವೆ ಬಾವಿಯಲ್ಲಿ ಸ್ವಲ್ಪ ಮಟ್ಟಿಗೆ ನೀರು ಬರುತ್ತಿದೆ. ಈ ನೀರನ್ನು ತಮ್ಮ ಜಮೀನಿನಲ್ಲಿ ಬೆಳೆದಿರುವ ಗೋವಿನಜೋಳ, ಹತ್ತಿ, ಶೇಂಗಾ ಬೆಳೆಗಳಿಗೆ ಹಾಯಿಸಿದ್ದರೆ, ಜೀವಸೆಲೆ ಸಿಕ್ಕು ಬೆಳೆಗಳನ್ನು ಬದುಕಿಸಬಹುದಿತ್ತು.

ಆದರೆ, ಅವರು ಸ್ವಾರ್ಥವನ್ನು ಬದಿಗಿಟ್ಟು, ತಮ್ಮ ಬೆಳೆ ಒಣಗಿ ನಷ್ಟ ಅನುಭವಿಸುತ್ತಿದ್ದರೂ ಕೂಡ, ಇಲ್ಲಿನ ಜನತಾ ಪ್ಲಾಟ್ ಮತ್ತು ಹೊಲದ ಮನೆಗಳಿಗೆ ನೀರು ಕೊಟ್ಟು, ಪುಣ್ಯದ ಕೆಲಸ ಮಾಡುತ್ತಿದ್ದಾರೆ. ವಿದ್ಯುತ್ ಇದ್ದಾಗ ಕೊಳವೆ ಬಾವಿಯಿಂದ ಟ್ಯಾಂಕರ್‌ಗೆ ನೀರು ತುಂಬಿಸುತ್ತಾರೆ. ಆ ಬಳಿಕ ಜನರು ತಮ್ಮ ಕೊಡಗಳನ್ನು ತಂದು ಟ್ಯಾಂಕರ್‌ನಲ್ಲಿನ ನೀರನ್ನು ತುಂಬಿಕೊಂಡು ಹೋಗುತ್ತಾರೆ. ಕುಡಿಯಲು ಮತ್ತು ಬಳಸಲು ಇದೇ ನೀರನ್ನು ಬಳಸುತ್ತಾರೆ. ಕೆಲವರು ತಳ್ಳುಗಾಡಿ, ಬೈಕ್ ಮೇಲೆ ಇಟ್ಟುಕೊಂಡು ಹೋದರೆ, ಹಲವರು ತಲೆ ಮೇಲೆ ಕೊಡಗಳನ್ನು ಹೊತ್ತೊಯ್ಯುತ್ತಾರೆ.

ಮಳೆ ಆಗಿದ್ದರೆ ಯಾವುದೇ ಸಮಸ್ಯೆ ಆಗುತ್ತಿರಲಿಲ್ಲ. ನಮಗೆ ಮತ್ತು ಜನರಿಗೆ ನೀರಿನ ಕೊರತೆ ಉಂಟಾಗುತ್ತಿರಲಿಲ್ಲ. 14 ಎಕರೆಯಲ್ಲಿ ಬೆಳೆದಿದ್ದ ಗೋವಿನಜೋಳ, ಹೆಸರು, ಶೇಂಗಾ, ಹತ್ತಿ ಒಣಗಿ ಹೋಗಿವೆ. ಎಕರೆಗೆ 15 ಸಾವಿರ ರೂ. ಖರ್ಚು ಮಾಡಿದ್ದೆವು. ಏನಿಲ್ಲ ಅಂದರೂ ಎಕರೆ 40 ಸಾವಿರ ರೂ. ಆದಾಯ ನಿರೀಕ್ಷಿಸಿದ್ದೆವು. ಆದರೆ, ಹಾಕಿದ ಬಂಡವಾಳ ಕೂಡ ಬರುವುದಿಲ್ಲ. ಇನ್ನೂ ಮೇವಿನ ಸಮಸ್ಯೆಯಿಂದ ಎತ್ತು, ಎಮ್ಮೆ, ಆಡು ಮಾರಾಟ ಮಾಡಿದ್ದೇವೆ ಎಂದು ಗಂಗಾಧರ ಉಳ್ಳೇಗಡ್ಡಿ ತಮ್ಮ ಅಳಲು ತೋಡಿಕೊಂಡರು.

ಉದಯವಾಹಿನಿ ಚಿತ್ರ



> ಈ ಬಾರಿ ಮಳೆ ಸಂಪೂರ್ಣ ಕೈ ಕೊಟ್ಟಿದೆ. ಕೊಳವೆ ಬಾವಿಯಲ್ಲಿ ನೀರು ಕಡಿಮೆ ಆಗಿದೆ. ಜನರಿಗೆ ಕೊಡುವುದು ಬಿಟ್ಟು ನಮ್ಮ ಬೆಳೆಗಳಿಗೆ ಹಾಯಿಸಿದ್ದರೆ, ನಮ್ಮ ಬೆಳೆಗಳು ಬದುಕುತ್ತಿದ್ದವು. ನಮ್ಮ ಹಿರಿಯರು ಹೇಳಿದಂತೆ ಮೊದಲಿನಿಂದ ಜನರಿಗೆ ನೀರು ಕೊಡುತ್ತಿದ್ದು, ಅದನ್ನು ಮುಂದುವರಿಸಿದ್ದೇವೆ ಎಂದರು.
> –ಗಂಗಾಧರ ಉಳ್ಳೇಗಡ್ಡಿ

> ನಮಗೆ ಹಾನಿ ಆಗುತ್ತದೆ ಅಂತಾ ಗೊತ್ತಿದ್ದರೂ ಕೂಡ ಊರವರಿಗೆ ಕಳೆದ 10 ವರ್ಷಗಳಿಂದ ನೀರು ಕೊಡುತ್ತಿದ್ದೇವೆ. ಇದು ಪುಣ್ಯದ ಕೆಲಸ ಅಂತಾ ಭಾವಿಸಿಕೊಂಡು ಈ ಕಾರ್ಯ ಮಾಡುತ್ತಿದ್ದೇವೆ. ಊರವರು ನೀವು ಒಳ್ಳೆಯ ಕೆಲಸ ಮಾಡುತ್ತಿದ್ದಿರಿ, ನಿಮಗೆ ದೇವರು ಚೊಲೋ ಮಾಡಲಿ ಎನ್ನುತ್ತಾರೆ ಎಂದರು.
> –ಗಂಗಾಧರ ಉಳ್ಳೇಗಡ್ಡಿ

ಜಿಲ್ಲಾ ಪಂಚಾಯತ್ ಸಿಇಒ ರಾಹುಲ್ ಶಿಂಧೆ , ಸಂಕಷ್ಟದ ಸಮಯದಲ್ಲಿ ಗ್ರಾಮಸ್ಥರಿಗೆ ನೀರು ಕೊಡುತ್ತಿರುವುದು ಅತ್ಯಂತ ಮಾನವೀಯ ಕಾರ್ಯ. ಆ ಕುಟುಂಬಕ್ಕೆ 10 ಸಾವಿರ ರೂ. ಬಾಡಿಗೆ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ.